ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 97 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 25–10–2023 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 97 | Title- Code: KARKAN 28269 | Chitradurga | Date: 25-10-2023 Wednesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಕಾಯಕ ಸಮುದಾಯದ ಬಗ್ಗೆ ಕಿಂಚಿತ್ತೂ ಸೌಜನ್ಯವಿಲ್ಲದ ಸರ್ಕಾರ, ರಾಜಕಾರಣಿಗಳು 2
ಶ್ರೀ ಅಹೋಬಲ ಟಿವಿಎಸ್‌ನಲ್ಲಿ ಮಂಗಳಮುಖಿಯರಿಂದ ಆಯುಧ ಪೂಜೆ 3
ವಿಜಯದಶಮಿಯ: ರಾಜ್ಯದ ಜನತೆಗೆ ಶುಭ ಕೋರಿದ ಸಿಎಂ 4

ಸುದ್ದಿ, ಜಾಹಿರಾತಿಗೆ 9686622252

## ಅಂಬಾರಿಯಲ್ಲಿ ತಾಯಿ ಚಾಮುಂಡೇಶ್ವರಿ ಜನಸಾಗರದಲ್ಲಿ ರಾಜಬೀದಿಯಲ್ಲಿ

# ಅಭಿಮನ್ಯು ಗಜಗಾಂಭೀರ ನಡಿಗೆ









» **ಮೈಸೂರು**

ಐತಿಹಾಸಿಕ 414ನೇ ದಸರಾ ಮಹೋತ್ಸವ ಅಂತಿಮ ಘಟ್ಟವನ್ನು ತಲುಪಿದೆ. ಮಂಗಳವಾರ ಸಂಜೆ 4.40ರಿಂದ 5ರವರೆಗೆ ಸಂದ ಶುಭ ಮೀನ ಲಗ್ನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಿನ್ನದ ಅಂಬಾರಿಯಲ್ಲಿ ವಿರಾಜಮಾನಳಾಗಿ ಕುಳಿತಿರುವ ಮಾತೆ ಚಾಮುಂಡೇಶ್ವರಿ ಮೂರ್ತಿಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಜಂಬೂ ಸವಾರಿ ಮೆರವಣಿಗೆಗೆ ಚಾಲನೆ ನೀಡಿದರು.

ಅರಮನೆ ಅಂಗಳದಲ್ಲಿ ಕ್ಯಾಪ್ಟನ್ ಅಭಿಮನ್ಯು ಹೊತ್ತು ತಂದ 750 ಕೆ.ಜಿ. ತೂಕದ ಚಿನ್ನದ ಅಂಬಾರಿಯಲ್ಲಿದ್ದ ತಾಯಿ ಚಾಮುಂಡೇಶ್ವರಿ ಮೂರ್ತಿಗೆ ಸಮೀಪಿಸುತ್ತಿದ್ದಂತೆ ಪುಷ್ಪಾರ್ಚನೆ ಸಲ್ಲಿಸಿ, ದೇವಿಗೆ ಕೈಮುಗಿದರು. ಈ ವೇಳೆ ಡಿಸಿಎಂ ಡಿ.ಕೆ. ಶಿವಕುಮಾರ್ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಮೇಯರ್ ಶಿವಕುಮಾರ್, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಹಾಗೂ ನಗರ ಪೊಲೀಸ್ ಆಯುಕ್ತ ರಮೇಶ್ ಬಾನೋತ್ ಸಾಥ್ ನೀಡಿದರು.

ಚಿನ್ನದ ಅಂಬಾರಿ ಹೊತ್ತ ಅಭಿಮನ್ಯು ಅರಮನೆ ವೇದಿಕೆಯತ್ತ ಬಂದು ನಿಂತ ಬಳಿಕ ಮೊದಲು ರಾಷ್ಟ್ರಗೀತೆಯನ್ನು ಮೊಳಗಿಸಲಾಯಿತು. ತಕ್ಷಣವೇ 21 ಕುಶಾಲತೋಪುಗಳನ್ನು ಸಿಡಿಸುವ ಮೂಲಕ ಗೌರವವನ್ನು ಅರ್ಪಿಸಲಾಯಿತು.

ಇದಾದ ಬಳಿಕ ಚಿನ್ನದ ಅಂಬಾರಿ ಹೊತ್ತ ಅಭಿಮನ್ಯು ಅರಮನೆ ಅಂಗಳದಿಂದ ಬನ್ನಿಮಂಟಪದತ್ತ ಪ್ರಯಾಣ ಬೆಳೆಸಿದ. ಈ ವೇಳೆ ಲಕ್ಷ್ಮಿ ಹಾಗೂ ವಿಜಯ ಆನೆಗಳು ಕುಮ್ಕಿ ಆನೆಗಳಾಗಿ ಅಂಬಾರಿಯ ಎಡ–ಬಲದಲ್ಲಿ ಸಾಗಿದರೆ, ಗಜಪಡೆಯ ಹಿರಿಯಣ್ಣ, ಮಾಜಿ ಕ್ಯಾಪ್ಟನ್ ಅರ್ಜುನ ನಿಶಾನೆ ಆನೆಯಾಗಿ, ಧನಂಜಯ ನೌಫತ್ ಆನೆಯಾಗಿ ಮತ್ತು ಇನ್ನುಳಿದವು ಸಾಲಾನೆಯಾಗಿ ಪಾಲ್ಗೊಂಡು ಗಮನ ಸೆಳೆದವು. ಇನ್ನು ಅಂಬಾರಿ ಜತೆ 200 ಮಂದಿ ರಾಜ ಪರಿವಾರದ ಧಿರಿಸಿನೊಂದಿಗೆ ಸಾಗಿದ್ದು ಮತ್ತೊಂದು ಆಕರ್ಷಣೆಯಾಗಿತ್ತು.

ಅರಮನೆ ಅಂಗಳದಿಂದ ಬನ್ನಿಮಂಟಪದವರೆಗೆ ಒಟ್ಟು 5 ಕಿ.ಮೀ. ದೂರದ ವರೆಗೆ ಜಂಬೂ ಸವಾರಿ ಸಾಗಲಿದೆ. ಜಂಬೂ ಸವಾರಿಯ ಹಿಂಬದಿಯಿಂದ 49 ಸ್ತಬ್ಧ ಚಿತ್ರಗಳು, 50ಕ್ಕೂ ಹೆಚ್ಚು ಕಲಾತಂಡಗಳು, ಪೊಲೀಸ್ ಬ್ಯಾಂಡ್ ಪಡೆಗಳು ಸೇರಿ ಒಟ್ಟು 150 ಪ್ರಾಕಾರಗಳು ಮೆರವಣಿಗೆಯಲ್ಲಿ ಭಾಗಿಯಾಗಿವೆ.

**ಬ್ಯಾರಿಕೇಡ್ ಕೋಟೆಯೇ ನಿರ್ಮಾಣ:** ರಾಜಪಥದಲ್ಲಿ ಜಂಬೂ ಸವಾರಿ ಸಾಗುವುದರಿಂದ ಆಲ್ಬರ್ಟ್ ವಿಕ್ಟರ್ ರಸ್ತೆ, ನ್ಯೂ ಸಯ್ಯಾಜಿರಾವ್ ರಸ್ತೆಯ ಇಕ್ಕೆಲಗಳಲ್ಲಿ ಬ್ಯಾರಿಕೇಡ್ ಅನ್ನು ಅಳವಡಿಕೆ ಮಾಡಲಾಗಿದೆ. ರಾಜಪಥದ ಚಾಮರಾಜ ವೃತ್ತ, ಕೃಷ್ಣರಾಜ ವೃತ್ತ, ಸರ್ ಎಂ. ವಿಶ್ವೇಶ್ವರಯ್ಯ ವೃತ್ತಗಳಲ್ಲಿ ಸಾರ್ವಜನಿಕರು ರಸ್ತೆಗೆ ಇಳಿಯದಂತೆ ಬ್ಯಾರಿಕೇಡ್ ಕೋಟೆಯನ್ನೇ ನಿರ್ಮಾಣ ಮಾಡಲಾಗಿದೆ.

**ಅರಮನೆಯಲ್ಲಿ 25 ಸಾವಿರ ಆಸನ ವ್ಯವಸ್ಥೆ:** ಜಂಬೂ ಸವಾರಿ ವೀಕ್ಷಣೆಗೆಂದು ಅರಮನೆ ಅಂಗಳದಲ್ಲಿ 25ರಿಂದ 30 ಸಾವಿರ ಮಂದಿ ಕುಳಿತು ವೀಕ್ಷಣೆ ಮಾಡಲು ಆಸನ ವ್ಯವಸ್ಥೆ ಮಾಡಲಾಗಿದೆ. ರಾಜಪಥದಲ್ಲಿ 4ರಿಂದ 5 ಲಕ್ಷ ಜನ ಜಂಬೂ ಸವಾರಿ ಮೆರವಣಿಗೆ ವೀಕ್ಷಣೆ ಮಾಡುತ್ತಿದ್ದಾರೆ. ಅರಮನೆ ಆವರಣಕ್ಕೆ ಗೋಲ್ಡ್ ಪಾಸ್ ಸೇರಿದಂತೆ ಪಾಸ್ ಇದ್ದವರಿಗೆ ಮಾತ್ರವೇ ಅವಕಾಶವನ್ನು ಕಲ್ಪಿಸಲಾಗಿದೆ. ಮುಖ್ಯಮಂತ್ರಿ, ಸಂಪುಟ ಸಚಿವರು, ಸ್ಪೀಕರ್, ಶಾಸಕರಿಗೆ ವಿಶೇಷ ಆಸನ ವ್ಯವಸ್ಥೆಯನ್ನು ಮಾಡಲಾಗಿದೆ. ಹೈಕೋರ್ಟ್, ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಿಗೂ ಅವಕಾಶ ಕಲ್ಪಿಸಲಾಗಿದೆ. ಗೋಲ್ಡ್ ಕಾರ್ಡ್ ಹೊಂದಿದವರಿಗೆ ಅರಮನೆ ಎದುರಿನಲ್ಲೇ ಆಸನದ ವ್ಯವಸ್ಥೆಯನ್ನು ಮಾಡಲಾಗಿತ್ತು.

**ಮೈಸೂರು ಸುತ್ತುವರಿದಿರುವ ಪೊಲೀಸರು!:** ನಾಡ ಹಬ್ಬಕ್ಕೆ ಮೈಸೂರು ನಗರದಾದ್ಯಂತ ಪೊಲೀಸ್ ಸರ್ಪಗಾವಲು ಹಾಕಲಾಗಿದೆ. ಉಗ್ರರ ಕರಿನೆರಳಿನ ಆತಂಕ ಇರುವ ಹಿನ್ನೆಲೆಯಲ್ಲಿ ದಸರಾ ಭದ್ರತೆಗಾಗಿಯೇ ಒಟ್ಟು 6000 ಪೊಲೀಸರನ್ನು ನಿಯೋಜನೆ ಮಾಡಲಾಗಿದೆ. ನಗರ ಪೊಲೀಸ್ ಆಯುಕ್ತ ರಮೇಶ್ ಬಾನೋತ್ ನೇತೃತ್ವದಲ್ಲಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಅಚ್ಚುಕಟ್ಟಾಗಿ ನಡೆಸಲು ಪೊಲೀಸರು ಸಿದ್ಧತೆ ಕೈಗೊಂಡಿದ್ದಾರೆ. ಮೆರವಣಿಗೆಯ ಭದ್ರತೆಗಾಗಿ ಮೈಸೂರು ನಗರದ 1255 ಪೊಲೀಸರು, ಹೊರ ಜಿಲ್ಲೆಯಿಂದ 3580, ಗೃಹ ರಕ್ಷಕ ದಳದ 650 ಸಿಬ್ಬಂದಿ ಸೇರಿದಂತೆ ಒಟ್ಟು 5485 ಅಧಿಕಾರಿ ಮತ್ತು ಸಿಬ್ಬಂದಿಯನ್ನು ಬಂದೋಬಸ್ತ್‌ಗೆ ನಿಯೋಜನೆ ಮಾಡಲಾಗಿದೆ. ಮನೆ, ಖಾಸಗಿ ಸಂಸ್ಥೆಗಳು ಸೇರಿ 13 ಸಾವಿರ ಸಿಸಿ ಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಜಂಬೂ ಸವಾರಿ ಸಾಗುವ ಮಾರ್ಗಕ್ಕೆ ಪೊಲೀಸ್ ಇಲಾಖೆಯಿಂದ ಹೆಚ್ಚುವರಿ 50 ಸಿಸಿ ಕ್ಯಾಮರಾಗಳನ್ನು ಹಾಕಲಾಗಿದೆ.

ಇದಲ್ಲದೆ, ಕೆ.ಎಸ್.ಆರ್.ಪಿ, ಡಿ.ಎ.ಆರ್. ಹಾಗೂ ಸಶಸ್ತ್ರ ಮೀಸಲು ಪಡೆಯನ್ನು ನಿಯೋಜನೆ ಮಾಡಲಾಗಿದೆ. ಆಯಕಟ್ಟಿನಲ್ಲಿ ಹಾಗೂ ಸೂಕ್ಷ್ಮ ಸ್ಥಳಗಳಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ. ಹೀಗಾಗಿ ಅನುಮಾನಾಸ್ಪದ ನಡವಳಿಕೆಯುಳ್ಳವರ ಮೇಲೆ ತೀವ್ರ ನಿಗಾ ವಹಿಸಲಾಗಿದೆ.

ಪುಟ ↘ 2

# ವಾಲ್ಮೀಕಿ ಭವನ ಕಾಮಗಾರಿ ಪೂರ್ಣಕ್ಕೆ ಶೀಘ್ರ ಹಣ ಬಿಡುಗಡೆ

### ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಬಿ.ನಾಗೇಂದ್ರ ಅಭಯ



» **ಚಿತ್ರದುರ್ಗ**

ವಾಲ್ಮೀಕಿ ಭವನ ಪೂರ್ಣಗೊಳಿಸಲು ಅಗತ್ಯವಿರುವ ಅನುದಾನ ನೀಡಿ ಪೂರ್ಣಗೊಳಿಸಿ ಅದ್ದೂರಿಯಾಗಿ ಉದ್ಘಾಟನೆ ನೇರವೇರಿಸಲಾಗುತ್ತದೆ ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಬಿ.ನಾಗೇಂದ್ರ ಅವರು ಅಭಯ ನೀಡಿದರು.

ಖಾಸಗಿ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಚಿವರು ಮದಕರಿನಾಯಕ ಪ್ರತಿಮೆಗೆ ಮಾಲರ್ಪಣೆ ಮಾಡಿ ನಂತರ ನಾಯಕ ಸಮಾಜದವರು ಮನವಿಯಂತೆ ವಾಲ್ಮೀಕಿ ಭವನಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್ ಅವರು ಈಗ ಹಾಕಿರುವ ಖುರ್ಚಿಗಳು ಫಿಕ್ಸ್ ಇವೆ ಅವನ್ನು ತೆಗೆದು ಅಗತ್ಯವಿದ್ದಾಗ ಬಳಸುವಂತೆ ಕುರ್ಚಿಗಳು ಹಾಕಬೇಕು,ಶೌಚಾಲಯ ಸಮಸ್ಯೆ ಮತ್ತು ಭವನದ ಮೇಲೆ ಪ್ರತಿಮೆಗಳು ನಿರ್ಮಿಸಬೇಕು. ಕಟ್ಟಡದ ಒಳಗೆ ಸುಂದವಾಗಿ ಕಾಣಿಸುತ್ತಿಲ್ಲ ಅದು ಸೇರಿ ಸಂಪೂರ್ಣ ಅಭಿವೃದ್ಧಿ ಮಾಡಲು ಅನುದಾನ ತುರ್ತಾಗಿ ನೀಡಬೇಕು ಸಚಿವರಿಗೆ ಮನವಿ ಮಾಡಿದರು ಇದಕ್ಕೆ ಉತ್ತರಿಸಿದ ಸಚಿವ ಬಿ.ನಾಗೇಂದ್ರ ಅವರು ನಮ್ಮಸಮಾಜದ ಅಭಿವೃದ್ಧಿಗೆ ನಾನು ಬದ್ದವಾಗಿದ್ದೇನೆ. ಭವನದ ಅಭಿವೃದ್ಧಿಗೆ ಅಗತ್ಯವಿರುವ ಹಣಕ್ಕೆ ನಾಯಕ ಸಮಾಜದ ಮುಖಂಡರು ಮನವಿ ಮಾಡಿದ್ದಾರೆ. ಇದು ನನ್ನ ಜವಬ್ದಾರಿಯಾಗಿದೆ ಎಂದು ಸ್ಥಳದಲೇ ಬೆಂಗಳೂರು ಇಲಾಖೆ ಎಂಡಿ ಅವರಿಗೆ ಫೋನ್ ಮಾಡಿ ವಾಲ್ಮೀಕಿ ಜಯಂತಿ ನಂತರ ಬೆಂಗಳೂರಿನ ನಮ್ಮ ಇಲಾಖೆ ಪಿಎಸ್, ಇಂಜನಿಯರ್ ಗಳ ತಂಡ ಚಿತ್ರದುರ್ಗಕ್ಕೆ ಆಗಮಿಸಿದ ಎಷ್ಟು ಹಣ ಅಗತ್ಯವಿದೆ ಎಂದು ಅಂದಾಜು ಪಟ್ಟಿ ಮಾಡಿ ನಾನು ಕೂಡಲೇ ಹಣ ಬಿಡುಗಡೆ ಮಾಡುತ್ತೇನೆ ಎಂದು ಸೂಚಿಸಿದರು.

ಪುಟ ↘ 2



## ಫಾಸ್ಟ್ ನ್ಯೂಸ್

### ಅಭಿಮನ್ಯು ಗಜಗಾಂಭೀರ ನಡೆಗೆ

» ಮೊದಲ ಪುಟದಿಂದ

**ಸಂಚಾರ ಬಂದ್:** ಜಂಬೂ ಸವಾರಿ ಸಾಗುವ ದಾರಿಯ ಆಯಕಟ್ಟಿನ ಪ್ರದೇಶಗಳಲ್ಲಿ ಮಧ್ಯಾಹ್ನದ ನಂತರ ರಸ್ತೆ ಸಂಚಾರವನ್ನು ಬಂದ್ ಮಾಡಲಾಗಿತ್ತು. ಮಧ್ಯಾಹ್ನ 12 ಗಂಟೆ ನಂತರ ಅರಮನೆ ಸುತ್ತ, ಜಂಬೂ ಸವಾರಿ ಸಾಗುವ ರಸ್ತೆಗಳಲ್ಲಿ ಏಕಮುಖ ಸಂಚಾರಕ್ಕೆ ಮಾತ್ರವೇ ಅವಕಾಶವನ್ನು ನೀಡಲಾಗಿದೆ.

**ಪಂಜಿನಕವಾಯತು ಬಳಿಕ ತೆರೆ:** ಜಂಬೂ ಸವಾರಿಯು ಅರಮನೆ ಆವರಣದಿಂದ ಬನ್ನಿಮಂಟಪಕ್ಕೆ ತೆರಳಿದ ತರುವಾಯ ರಾತ್ರಿ 7.30ಕ್ಕೆ ಬನ್ನಿಮಂಟಪದಲ್ಲಿ ಪಂಜಿನ ಕವಾಯತು ಪ್ರಾರಂಭವಾಗಲಿದೆ. ಈ ವೇಳೆ ಸಾಹಸ ಪ್ರದರ್ಶನಗಳು ನಡೆಯಲಿದ್ದು, ಈ ಎಲ್ಲ ಪ್ರಹಸನಗಳ ಬಳಿಕ ಮೈಸೂರು ದಸರೆಗೆ ತೆರೆ ಬೀಳಲಿದೆ.

### ನಿಂಗಮ್ಮ ನಿಧನ

» ಹೊಸದುರ್ಗ



ತಾಲೂಕಿನ ಬೆನಕನಹಳ್ಳಿ ಗ್ರಾಮದ ಮಡಿವಾಳರ ನಿಂಗಮ್ಮ (70) ನಿಧನ ಹೊಂದಿದರು. ಮೃತರು ಇಬ್ಬರು ಪುತ್ರರು ಹಾಗೂ ಅಪಾರ ಬಂಧು ಬಳಗವನ್ನು ಬಿಟ್ಟು ಅಗಲಿದ್ದು ಮೃತರ ಅಂತ್ಯಕ್ರಿಯೆಯು ಗ್ರಾಮದ ಹ ೊರ ವ ಲಂ ು ದ ರುದ್ರಭೂಮಿಯಲ್ಲಿ ಸಂಜೆ ನೆರವೇರಿತು. ಮೃತ ನಿಂಗಮ್ಮನವರು ರಾಜ್ಯ ಶ್ರೀ ವೀರಮಡಿವಾಳ ಮಾಚಿದೇವ ಯುವ ಸೇನಾ ಪಡೆಯ ಗೌರವಾಧ್ಯಕ್ಷರಾದ ಬೆನಕನಹಳ್ಳಿ ಶಿವಪ್ಪನವರ ತಾಯಿಯಾಗಿದ್ದು ಇವರ ನಿಧನಕ್ಕೆ ಸೇನಾಪಡೆಯ ಅಧ್ಯಕ್ಷ ನಾಗತಿಹಳ್ಳಿಮಂಜುನಾಥ್ ಸೇರಿದಂತೆ ಸಮಾಜದ ಮುಖಂಡರುಗಳು ತೀರ್ವ ಸಂತಾಪ ಸೂಚಿಸಿದ್ದಾರೆ.

### ಆರ್.ಎಸ್.ಎಸ್ ರತ್ನಾಕರಶೇಟ್ ನಿಧನ

» ಹೊಸದುರ್ಗ



ಹೊಸದುರ್ಗ ಪಟ್ಟಣದ ಆರ್.ಎಸ್.ಎಸ್.ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸುತಿದ್ದ ರತ್ನಾಕರ ಶೇಟ್ (60) ಅವರು ಹೃದಯಾಘಾತದಿಂದ ನಿಧನ ಹೊಂದಿದ್ದಾರೆ.ರತ್ನಾಕರ ಶೇಟ್ ಅವರಿಗೆ ಶುಕ್ರವಾರ ಸಂಜೆ ಹೃದಯಾಘಾತಕ್ಕೊಳಗಾಗಿ ಶಿವಮೊಗ್ಗದ ಮೆಟ್ರೋ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಶನಿವಾರ ಮೃತಪಟ್ಟಿದ್ದು ಮೃತರು ಪತ್ನಿ ಓರ್ವ ಪುತ್ರನನ್ನ ಬಿಟ್ಟು ಅಗಲಿದ್ದಾರೆ ಮೃತರ ಅಂತ್ಯಕ್ರಿಯೆಯು ಪಟ್ಟಣದ ರುದ್ರಭೂಮಿಯಲ್ಲಿ ನೆರವೇರಿತು.

### ಎಚ್‌ಎಸ್‌ಆರ್‌ಪಿ ಅಳವಡಿಕೆಗೆ ಗಡುವನ್ನು ವಿಸ್ತರಣೆ ಸಾಧ್ಯತೆ

» ಬೆಂಗಳೂರು

2019ರ ಏಪ್ರಿಲ್ ತಿಂಗಳಿಗೂ ಮೊದಲು ನೋಂದಾಯಿಸಲಾದ ವಾಹನಗಳಿಗೆ ಹೈ–ಸೆಕ್ಯುರಿಟಿ ರಿಜಿಸ್ಟ್ರೇಶನ್ ಪ್ಲೇಟ್‌ಗಳ (ಎಚ್‌ಎಸ್‌ಆರ್‌ಪಿ) ಅಳವಡಿಕೆಯ ಗಡುವು ನವೆಂಬರ್ 17ರಂದು ಕೊನೆಯಾಗಲಿದೆ. ನಂಬರ್ ಪ್ಲೇಟ್ ಅಳವಡಿಕೆಗೆ ಸಾರ್ವಜನಿಕರು ನಿರಾಸಕ್ತಿ ತೋರುತ್ತಿದ್ದು, ರಾಜ್ಯ ಸರ್ಕಾರವು ಎಚ್‌ಎಸ್‌ಆರ್‌ಪಿ ಅಳವಡಿಕೆಗೆ ಗಡುವನ್ನು ವಿಸ್ತರಿಸುವ ಸಾಧ್ಯತೆಯಿದೆ. ರಾಜ್ಯದಲ್ಲಿ ನೋಂದಣಿಯಾಗಿರುವ 2 ಕೋಟಿ ಹಳೆಯ ವಾಹನಗಳ ಪೈಕಿ ಕೇವಲ 1.75 ಲಕ್ಷ (ಶೇ 10ಕ್ಕಿಂತ ಕಡಿಮೆ) ವಾಹನಗಳಿಗೆ ಮಾತ್ರ ಹೊಸ ನಂಬರ್ ಪ್ಲೇಟ್ ಅಳವಡಿಸಲಾಗಿದೆ. ನಂಬರ್ ಪ್ಲೇಟ್ ಅಳವಡಿಸಿಕೊಳ್ಳಲು ಜನರನ್ನು ಉತ್ತೇಜಿಸಲು ಹೆಚ್ಚಿನ ಪ್ರಚಾರ ನೀಡುವ ಸಾಧ್ಯತೆಯಿದೆ ಎಂದು ಹಿರಿಯ ಸಾರಿಗೆ ಅಧಿಕಾರಿಗಳು ತಿಳಿಸಿದ್ದಾರೆ. ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವಾಲಯವು ಭದ್ರತೆ ಸೇರಿದಂತೆ ವಿವಿಧ ಕಾರಣಗಳಿಗಾಗಿ ಮತ್ತು ವಾಹನಗಳ ದುರುಪಯೋಗವನ್ನು ತಡೆಯಲು ಹಳೆಯ ವಾಹನಗಳಿಗೆ ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸುವುದನ್ನು ಕಡ್ಡಾಯಗೊಳಿಸಿದೆ. ಎಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಒಮ್ಮೆ ಅಳವಡಿಸಿದರೆ ನಂತರ ತೆಗೆಯಲು ಸಾಧ್ಯವಾಗುವುದಿಲ್ಲ. ಇದರಿಂದಾಗಿ ನಂಬರ್ ಪ್ಲೇಟ್‌ಗಳ ವಿನಿಮಯಕ್ಕೆ ಸಾಧ್ಯವಾಗುವುದಿಲ್ಲ. ಏಪ್ರಿಲ್ 1, 2019 ಕ್ಕೂ ಮೊದಲು ರಾಜ್ಯದಲ್ಲಿ ಸುಮಾರು 2 ಕೋಟಿ ವಾಹನಗಳು ನೋಂದಣಿಯಾಗಿವೆ. ಈ ನಂತರ ನೋಂದಣಿಯಾದ ಎಲ್ಲಾ ವಾಹನಗಳಿಗೂ ಕಡ್ಡಾಯವಾಗಿ ಎಚ್‌ಎಸ್‌ಆರ್‌ಪಿ ಪ್ಲೇಟ್‌ಗಳನ್ನು ಅಳವಡಿಸಲಾಗಿದೆ ಎಂದರು. ರಾಜ್ಯ ಸರ್ಕಾರದ ಅಧಿಸೂಚನೆಯಲ್ಲಿ ನವೆಂಬರ್ 17ರವರೆಗೆ ಗಡುವು ನೀಡಿದ್ದರೂ, ಸಾರ್ವಜನಿಕರಿಂದ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಹೀಗಾಗಿ, ಜನರನ್ನು ಉತ್ತೇಜಿಸಲು ಹೆಚ್ಚಿನ ಪ್ರಚಾರಕ್ಕೆ ಯೋಜಿಸುತ್ತಿದ್ದೇವೆ. ಆದರೆ, ಅದನ್ನು ತಾತ್ಕಾಲಿಕವಾಗಿ ನಿಲ್ಲಿಸಬೇಕಾಯಿತು. ಏಕೆಂದರೆ, ಮೂಲ ಸಲಕರಣೆ ತಯಾರಕರಿಂದ ಮಾನ್ಯತೆ ಪಡೆದಿರುವ ಎಚ್‌ಎಸ್‌ಆರ್‌ಪಿ ತಯಾರಕರಿಗೆ ಮಾತ್ರ ನಂಬರ್ ಪ್ಲೇಟ್ ಅಳವಡಿಕೆಗೆ ಅನುಮತಿ ನೀಡಿರುವುದರ ವಿರುದ್ಧ ಕೆಲವರು ನ್ಯಾಯಾಲಯದ ಮೊರೆ ಹೋಗಿದ್ದಾರೆ. ಗಡುವು ಕೊನೆಗೊಳ್ಳಲು ಒಂದು ತಿಂಗಳಿಗಿಂತ ಕಡಿಮೆ ಅವಧಿಯಿದ್ದು, ಸರ್ಕಾರವು ಮತ್ತೆ ಗಡುವನ್ನು ವಿಸ್ತರಿಸಬಹುದು ಎಂದು ಹೇಳಿದರು.

# ಕಾಯಕ ಸಮುದಾಯದ ಬಗ್ಗೆ ಕಿಂಚಿತ್ತೂ ಸೌಜನ್ಯವಿಲ್ಲದ ಸರ್ಕಾರ, ರಾಜಕಾರಣಿಗಳು

» ದಾವಣಗೆರೆ



ಸಮಾಜದ ಎಲ್ಲಾ ಸಮುದಾಯದ ಬಟ್ಟೆಗಳನ್ನು ಶುಭ್ರಗೊಳಿಸುವ ಮಡಿವಾಳ ಸಮುದಾಯದ ಬಗ್ಗೆ ಸರ್ಕಾರಗಳು, ರಾಜಕಾರಣಿಗಳು ಕೇವಲ ಓಟಿಗಾಗಿ, ಚಪ್ಪಾಳೆಗಾಗಿ ಓಲೈಸುವ ಮಾತುಗಳನ್ನು ಆಡುತ್ತಿವೆಯೇ ಹೊರತು, ನಮ್ಮ ಸಮುದಾಯದ ಏಳಿಗೆ, ಕಾಯಕಕ್ಕೆ ಮೌಲ್ಯ ನೀಡುವ, ಕುಂದುಕೊರತೆಗಳನ್ನು ಬಗೆಹರಿಸುವ ಕಿಂಚಿತ್ತೂ ಸೌಜನ್ಯದ ಮನಸ್ಸುಗಳು ಇವತ್ತಿನ ಸರ್ಕಾರ, ರಾಜಕಾರಣಿಗಳಿಗೆ ಇಲ್ಲದಂತಾಗಿದೆ ಎಂದು ಚಿತ್ರದುರ್ಗದ ಮಡಿವಾಳ ಮಾಚಿದೇವ ಮಹಾಸಂಸ್ಥಾನ ಮಠದ ಜಗದ್ಗುರು ಶ್ರೀ ಬಸವ ಮಾಚಿದೇವ ಸ್ವಾಮಿ ಅಸಮಾಧಾನ ವ್ಯಕ್ತ ಪಡಿಸಿದರು.

ನಗರದ ಹೊರವಲಯದಲ್ಲಿ ರಾಷ್ಟ್ರೀಯ ಹೆದ್ದಾರಿ 48ರಲ್ಲಿನ ಜಿಲ್ಲಾ ಪಂಚಾಯತಿ ಎದುರು ಇರುವ ಮಡಿಕಟ್ಟೆಯಲ್ಲಿ ಮಡಿಕಟ್ಟೆ (ಧೋಬಿಘಾಟ್) ವೃತ್ತಿಪರ ಮಡಿವಾಳರ ಸಂಘ, ದಾವಣಗೆರೆ, ಶ್ರೀ ಮಡಿವಾಳ ಮಾಚಿದೇವ ಜಿಲ್ಲಾ ಸಂಘ, ಜಿಲ್ಲಾ ಮಹಿಳಾ ಸಂಘದ ಆಶ್ರಯದಲ್ಲಿ ಆಯೋಜಿಸಲಾಗಿದ್ದ 14ನೇ ವರ್ಷದ ಶ್ರೀ ಬನ್ನಿಮಹಾಂಕಾಳಿದೇವಿಯ ದಸರಾ ಹಬ್ಬದ ಪೂಜಾ ಮಹೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.

ಮೇಲ್ವರ್ಗದ ಸಮುದಾಯಗಳು ಈಗಲೂ ನಮ್ಮನ್ನು ಕೀಳಾಗಿ ನೋಡುತ್ತವೆ. ಮಂದಿನ ಪೀಳಿಗೆಯ ಸ್ಥಿತಿ ಗಮನಿಸಿದರೆ ಅಘಾತ ಎನ್ನಿಸುತ್ತದೆ. ಕಾಯಕ ಮಾಡುವ ಸಮುದಾಯಗಳು ಹಿಂದೆ ಉಳಿಯುವಂತ ಸ್ಥಿತಿ ಇದೆ. ಯಾವುದೇ ಸರ್ಕಾರಗಳು, ಜನಪ್ರತಿನಿಧಿಗಳು ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಪ್ರಯತ್ನ ಮಾಡುತ್ತಿಲ್ಲ. ನಾವೇ ಜಾಗೃತರಾಗಿ ಎಲ್ಲರೂ ಒಟ್ಟಾಗಿ ಮುಂದುವರೆಬೇಕು. ಸಮುದಾಯವನ್ನು ಬೆಳೆಸುವ ನಿಟ್ಟಿನಲ್ಲಿ ನಾವು ಮಾನಸಿಕವಾಗಿ ಸಿದ್ಧರಾಗಿರಬೇಕು ಎಂದು ಕರೆ ನೀಡಿದರು.

ನಮಗೂ ಮುಂದುವರೆದಿರುವ ಸಮುದಾಯಗಳಿಗೂ, ಶ್ರೀಮಂತ ವರ್ಗಕ್ಕೆ ನಮಗೂ 100 ವರ್ಷಗಳ ಅಂತರವಿದೆ. ಉತ್ತಮ ಬಟ್ಟೆ, ಸಮಾಧಾನ ಹೊಂದಿದ್ದೇವೆ. ಆದರೆ, ನಾವಿನ್ನೂ ಶೋಚನೀಯ ಪರಿಸ್ಥಿತಿಯಲ್ಲಿ ಇದ್ದೇವೆ. ಇತ್ತೀಚೆಗೆ ನಮಗೆ ತಿಳುವಳಿಕೆ, ಅರಿವು, ಜ್ಞಾನ ಬಂದಿದೆ. ಆದರೂ ಅದಕ್ಕೆ ಒಂದು ಸವಾಲಿದೆ. ನಮಗಿಂತ ನಮ್ಮ ಮುಂದಿನ ಪೀಳಿಗೆ ಉತ್ತಮವಾಗಿ ಇರಬೇಕೆಂದು ಸಂಕಲ್ಪ ಮಾಡಿಕೊಳ್ಳುವ ಬದ್ದತೆ ಇದೆ. ನಮ್ಮ ಮಕ್ಕಳು ಉತ್ತಮ ಸ್ಥಿತಿಗೆ ಬಂದು ಉನ್ನತ ಹುದ್ದೆಗಳನ್ನ ಅಲಂಕರಿಸಬೇಕು. ಆರ್ಥಿಕ ಬದಲಾವಣೆಯ ಮೂಲಕ ಸಮುದಾಯ ಕಟ್ಟುವುದು ಸುಳ್ಳು, ಸ್ಫೂರ್ತಿದಾಯಕ ಮಾತುಗಳು ಶೋಷಿತರಿಗೆ ಶಕ್ತಿ ತುಂಬುತ್ತದೆ ಎಂದರು.

ಮಡಿಕಟ್ಟೆಯೆಂದರೆ ದೇವಸ್ಥಾನ ಇದ್ದಂತೆ, ಕುಲಗುರುಗಳು ಇರುವ ವಾಸಸ್ಥಾನ, ನಮ್ಮ ಕಾಯಕ ಮಾಡುವ ವೇಳೆ ಪರಿಶುದ್ಧವಾಗಿ ಇರಬೇಕು. ಮಡಿಕಟ್ಟೆ ಮಡಿಯ ದೇವಾಲಯ ಆಗಬೇಕು. ದುಶ್ಚಟಗಳ ತಾಣವಾಗಬಾರದು. ಕಾಯಕ ಮಾಡುವವರೇ ಸಮುದಾಯದ ಶಕ್ತಿ. ಮುಂಬರುವ ಜನವರಿ 5, 6ಕ್ಕೆ ಚಿತ್ರದುರ್ಗದಲ್ಲಿ ಕಾಯಕ ಜನೋತ್ಸವ ನಡೆಯಲಿದ್ದು, ರಾಜ್ಯದ ಪ್ರಮುಖರು, ಮುಖ್ಯಸ್ಥರು ಬರಲಿದ್ದಾರೆ. ಪರಿಶಿಷ್ಠ ಜಾತಿಗೆ ಸೇರ್ಪಡೆ, ಸಮುದಾಯದ ಜಾಗೃತಿ ಮಾಡಲಾಗುವುದು. ನಂತರ ಎಲ್ಲಾ ಜಿಲ್ಲೆಗಳಲ್ಲಿ ಮತ್ತೆ ಹೋರಾಟ, ಪ್ರತಿಭಟನೆ ಮಾಡಲಾಗುವುದು. ಅದಕ್ಕೂ ಮುನ್ನ ಸಿಎಂ ಬಳಿಗೆ ನಿಯೋಗ ಹೋಗಲಾಗುವುದು ಎಂದರು.

ಸಂಸದ ಡಾ.ಜಿ.ಎಂ.ಸಿದ್ದೇಶ್ವರ್ ಮಾತನಾಡಿ, ಎಲ್ಲಾ ಕಾಯಕ ಸಮುದಾಯಗಳ ಜೊತೆ ಮಡಿವಾಳ ಸಮುದಾಯ ಚಿಕ್ಕ ಸಮುದಾಯ. ಎಲ್ಲಾ ಸಮುದಾಯಕ್ಕೆ ಶುಭ್ರವಾದ ಬಟ್ಟೆಗಳನ್ನು ಮಾಡಿಕೊಡುವ ಸಮುದಾಯ ನಿಮ್ಮದು. ಎಲ್ಲ ಸಮುದಾಯಗಳಿಗೆ ಬೇಕು. ನಿಮ್ಮ ಸಮುದಾಯ ಇಲ್ಲದಿದ್ದರೆ ನಾವುಗಳು ಎಷ್ಟು ದಿನಕ್ಕೊಮ್ಮೆ ಬಟ್ಟೆ ಒಗೆಯತ್ತಿದ್ದೆವೋ ಗೊತ್ತಿಲ್ಲ. ನಾವೆಲ್ಲಾ ಇಷ್ಟು ಶುಭ್ರವಾಗಿ, ವಾಸನೆ ರಹಿತವಾಗಿ ಇರುತ್ತಿದ್ದೇವೆ ಎಂದರೆ ಅದಕ್ಕೆ ಮಡಿವಾಳ ಸಮುದಾಯವೇ ಕಾರಣ, ಸಮಾಜಕ್ಕೆ ಮುಂದುವರೆಯಬೇಕಾದರೆ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿ ಎಂದು ಸಲಹೆ ನೀಡಿದರು.

ಸಮಾಜದ ಜಿಲ್ಲಾಧ್ಯಕ್ಷ ಎಂ.ನಾಗೇಂದ್ರಪ್ಪ ಮಾತನಾಡಿ, ಕಾಯಕ ಸಮುದಾಯವಾದ ಮಡಿವಾಳ ಸಮುದಾಯವು ನಮಗೆ ಬೇಕಾದ ಹಕ್ಕುಗಳನ್ನು ಪಡೆಯಲು ಹೋರಾಟದ ಅಗತ್ಯವಿದೆ. ಪರಿಶಿಷ್ಠ ಜಾತಿಗೆ ಸೇರ್ಪಡೆ, ಉಚಿತ ವಿದ್ಯುತ್ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸಿಕೊಳ್ಳಲು ಜೈಲು ಸೇರಿದರೂ ಸಹ ಸವಲತ್ತುಗಳನ್ನು ಪಡೆಯಬೇಕು. ಸರ್ಕಾರಗಳಿಗೆ ಕಿವಿ ಕೇಳುತ್ತಿಲ್ಲ. ಶ್ರೀಗಳು ಹೋರಾಟಕ್ಕೆ ಕರೆದರೆ ಎಲ್ಲರೂ ಪಾಲ್ಗೊಳ್ಳುವ ಮೂಲಕ ಹೋರಾಟ ಯಶಸ್ವಿ ಮಾಡಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಡಿಕಟ್ಟೆ ವೃತ್ತಿಪರ ಮಡಿವಾಳ ಸಂಘದ ಅಧ್ಯಕ್ಷ ಜಿ.ಕಿಶೋರ್‌ಕುಮಾರ್ ವಹಿಸಿದ್ದರು. ವೇದಿಕೆಯಲ್ಲಿ ಆರ್.ಮಲ್ಲೇಶಪ್ಪ, ಎಂ.ಎನ್.ಶಿವಮೂರ್ತಪ್ಪ, ಡೈಮಂಡ್ ಮಂಜುನಾಥ್, ಜಿ.ವಿಜಯ್‌ಕುಮಾರ್, ನಾಗಮ್ಮ ಇದ್ದರು. ಪತ್ರಕರ್ತ ಎಂ.ವೈ.ಸತೀಶ್, ಮಡಿಕಟ್ಟೆಯ ಆರ್.ಎಂ.ರವಿ, ಬಿ.ಬಸವರಾಜು, ಹೆಚ್.ಫಕ್ಕೀರಪ್ಪ, ಹನುಮಂತಪ್ಪ, ಹೆಚ್.ಪ್ರವೀಣ್, ಎಸ್.ನಿಂಗರಾಜ್, ಎಂ.ಅಡಿವೆಪ್ಪ, ಎಂ.ವೈ.ರಮೇಶ್, ಪಿ.ಗುತ್ತೆಪ್ಪ, ಡೈಮಂಡ್ ಮಾಲತೇಶ್, ಹೆಚ್.ಮಂಜುನಾಥ್, ಹೆಚ್.ಶಂಕರ್, ಎಸ್.ಅಜೇಯ್, ಸಚೀನ್, ರಾಹುಲ್, ಎಂ.ವೈ.ಕೃಷ್ಣಮೂರ್ತಿ, ಸಿದೇಶ್, ನಾಗಲಿಂಗ, ಮಡಿವಾಳಪ್ಪ, ಆರ್.ಎಂ.ನಾಗರಾಜ್, ಟಿ.ಪ್ರತಾಪ್ ಇದ್ದರು.



ಚಿತ್ರದುರ್ಗದ ಶ್ರೀ ಅಂಜನಾ ನೃತ್ಯ ಕಲಾಕೇಂದ್ರದ ವತಿಯಿಂದ ದಸರಾ ಹಬ್ಬದ ಪ್ರಯುಕ್ತ "ಭರತ ನೃತ್ಯ ಪರ್ವ" ಎನ್ನುವ ಶೀರ್ಷಿಕೆಯಲ್ಲಿ ನಿರಂತರ ನೃತ್ಯ ಕಾರ್ಯಕ್ರಮಗಳನ್ನು ಮಾಡುತ್ತಿದ್ದು," ಕನ್ನಡ ಮತ್ತು ಸಂಸ್ಕೃತಿ" ಇಲಾಖೆ ಸಹಯೋಗ ಹಾಗು "ಶ್ರೀ ಅಂಜನಾ ನೃತ್ಯ ಕೇಂದ್ರ ಕಲಾ " ವತಿಯಿಂದ ಚಿತ್ರದುರ್ಗದ ಶ್ರೀ ಶೃಂಗೇರಿ ಮಠ ಜೋಗಿಮಟ್ಟಿ ರಸ್ತೆ ಇಲ್ಲಿ ನೃತ್ಯ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

# 30ಕ್ಕೆ ಹೊಸದುರ್ಗದಲ್ಲಿ ಜನತಾದರ್ಶನ



» ಹೊಸದುರ್ಗ

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಅಧ್ಯಕ್ಷತೆಯಲ್ಲಿ ಇದೇ ತಿಂಗಳ ಅಕ್ಟೋಬರ್ 30.ರಂದು ಹೊಸ ದುರ್ಗ ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಜನತಾದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಅರ್ಜಿಯ ಮೂಲಕ ತಿಳಿಸಬಹುದಾಗಿದೆ ಎಂದು ತಹಶೀಲ್ದಾರ್ ತಿರುಪತಿ ಪಾಟೀಲ್ ಹೇಳಿದರು. ಪಟ್ಟಣದ ತಾಲೂಕು ಕಚೇರಿಯಲ್ಲಿ ಶನಿವಾರ ಆಯೋಜಿಸಿದ್ದ ಜನತಾದರ್ಶನ ಕಾರ್ಯಕ್ರಮ ಆಯೋಜನೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿಯೂ ಜನತಾದರ್ಶನ ಕಾರ್ಯಕ್ರಮ ನಡೆಯುತ್ತಿದ್ದು, ಅದರಂತೆಯೇ ಹೊಸದುರ್ಗ ಪಟ್ಟಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನತಾದರ್ಶನ ಕಾರ್ಯಕ್ರಮವನ್ನು ಅ.30 ರ ಸೋಮವಾರದಂದು ಏರ್ಪಡಿಸಿದ್ದು, ಅಂದು ಬೆಳಗ್ಗೆ 10.ಗಂಟೆಯಿಂದ ಕಾರ್ಯಕ್ರಮ ಆರಂಭಗೊಳ್ಳಲಿದೆ. ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಇರಲಿದ್ದು, ಪ್ರತಿಯೊಂದು ಇಲಾಖೆಗೂ ಸಂಬಂಧ ಪಟ್ಟಂತೆ ಪ್ರತ್ಯೇಕ ಕೌಂಟರ್ ತೆರೆಯಲಾಗುವುದು. ಯಾವ ಇಲಾಖೆಯಲ್ಲಿ ತಮ್ಮ ಸಮಸ್ಯೆ ಇದೆಯೋ, ಅಂತಹ ಇಲಾಖೆಯ ಕೌಂಟರ್ ಗೆ ಸಾರ್ವಜನಿಕರು ಬರವಣಿಗೆಯ ಮೂಲಕ ಅರ್ಜಿ ಸಲ್ಲಿಸಿ, ಐಪಿಜಿಆರ್ ಎಂಬ ತಂತ್ರಾಂಶದಲ್ಲಿ ನಮೂದಿಸಬೇಕು. ಇದರಿಂದ ಸಮಸ್ಯೆಗಳಿಗೆ ತ್ವರಿತಗತಿಯಲ್ಲಿ ಪರಿಹಾರ ಕ್ರಮವನ್ನು ಕೊಂಡುಕೊಳ್ಳಲು ಸಹಾಯಕವಾಗುತ್ತದೆ ಎಂದರು.

ಜನರ ಸಮಸ್ಯೆಗಳಿಗೆ ಎಲ್ಲಾ ಇಲಾಖೆಗಳು ಸಕಾರಾತ್ಮಕವಾಗಿ ಸ್ಪಂದಿಸಲಿವೆ. ಜನರ ಕೆಲಸಗಳನ್ನು ತ್ವರಿತಗತಿಯಲ್ಲಿ ಮಾಡಿಕೊಡುವ ಉದ್ದೇಶದಿಂದಾಗಿ, ಸಮಸ್ಯೆಗಳನ್ನು ಯಾವ ರೀತಿಯಾಗಿ ನಿವಾರಣೆ ಮಾಡಬಹುದೆಂಬುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಈ ಕಾರ್ಯಕ್ರಮದ ಬಗ್ಗೆ ಈಗಾಗಲೇ, ತಾಲೂಕಿನಾದ್ಯಂತ ವ್ಯಾಪಕ ಪ್ರಚಾರ ಮಾಡಲಾಗುತ್ತಿದ್ದು, ಸಾರ್ವಜನಿಕರು ತಪ್ಪದೇ ಕಾರ್ಯಕ್ರಮದಲ್ಲಿ ಪಾಲ್ಗೊಂಡು ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡು, ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸಿ ಎಂದು ಮನವಿ ಮಾಡಿದರು. ಈ ಸಭೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುನಿಲ್ ಕುಮಾರ್, ಸಹಾಯಕ ಕೃಷಿ ನಿರ್ದೇಶಕ ಈಶ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿಸ್ತರಣಾಧಿಕಾರಿ ಶಶಿಧರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಇದ್ದರು."

## ಪ್ರಮುಖ ಸುದ್ದಿ

# ವಾಲ್ಮೀಕಿ ಭವನ ಕಾಮಗಾರಿ ಪೂರ್ಣಕ್ಕೆ ಶೀಘ್ರ ಹಣ ಬಿಡುಗಡೆ





» ಮೊದಲ ಪುಟದಿಂದ

ವಾಲ್ಮೀಕಿ ಭವನವದ ಅಭಿವೃದ್ಧಿ ವಿಚಾರಕ್ಕೆ ಚಿಂತೆ ಮಾಡಬೇಡಿ. ನಾನು ಒಂದೇ ಬಾರಿ ಹಣ ಬಿಡುಗಡೆ ಮಾಡುತ್ತೇನೆ. ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಭವನ ಸರಿಪಡಿಸಿಕೊಳ್ಳಿ, ಭವನ ಸುಂದವಾಗಿದೆ. ಜನರಿಗೆ ಸದುಪಯೋಗ ಆಗಬೇಕು. ಆ ದೃಷ್ಟಿಯಿಂದ ಎಲ್ಲಾ ಅಭಿವೃದ್ಧಿಗೆ ಸಹಕಾರ ನೀಡುತ್ತೇನೆ. ನಾನೇ ಖುದ್ದು ಆಗಮಿಸಿ ಜಿಲ್ಲೆಯ ಎಲ್ಲಾರ ಜೊತೆ ಸೇರಿ ಅದ್ದೂರಿಯಾಗಿ ಉದ್ಘಾಟನೆ ಮಾಡೋಣ ಎಂದು ಸಮುದಾಯದ ಮುಖಂಡರಿಗೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಹೆಚ್.ಆಂಜನೇಯ,ನಾಯಕ ಸಮಾಜದ ತಾಲೂಕು ಅಧ್ಯಕ್ಷ ಬಿ.ಕಾಂತರಾಜ್, ಕಾಂಗ್ರೆಸ್ ಎಸ್ಟಿ ಸೆಲ್ ಜಿಲ್ಲಾ ಅಧ್ಯಕ್ಷ ಅಂಜಿನಪ್ಪ, ಶ್ರೀಅಹೋಬಲ ಟಿವಿಎಸ್ ಮಾಲೀಕ ಅರುಣ್, ಮುಖಂಡರಾದ ಗೋಪಾಲಸ್ವಾಮಿ ನಾಯಕ್ ,ದರ್ಶನ್ ಇಂಗಳದಾಳ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಓ.ಪರಮೇಶ್ವರಪ್ಪ, ಮ್ಯಾನೇಜರ್ ದಯಾನಂದ್ ಸೇರಿ ಸಮಾಜದ ಮುಖಂಡರು , ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ತೋಳಹುಣಸೆ ಪಿಎಸ್ಸೆಸ್ಎಂಆರ್ ಶಾಲೆಯಲ್ಲಿ ಸಿಬಿಎಸ್‌ಇ ಕ್ಲಸ್ಟರ್-8 ಅಥ್ಲೆಟಿಕ್ಸ್ ಕ್ರೀಡಾಕೂಟ

» ದಾವಣಗೆರೆ

ತೋಳ ಹುಣಸೆಯಲ್ಲಿರುವ ಶ್ರೀಮತಿ ಪಾರ್ವತಮ್ಮ ಶಾಮನೂರ ಶಿವಶಂಕರಪ್ಪ ವಸತಿಯುತ ಶಾಲಾ ಮೈದಾನದಲ್ಲಿ ಅ.26 ರ ನಾಳೆಯಿಂದ 28 ರ ವರೆಗೆ ಸಿಬಿಎಸ್‌ಇ ಕ್ಲಸ್ಟರ್ –8 ಅಥ್ಲೆಟಿಕ್ಸ್ ಕ್ರೀಡಾಕೂಟ ಆಯೋಜನೆಗೊಂಡಿದೆ. ಈ ಕ್ರೀಡಾಕೂಟದಲ್ಲಿ ಕರ್ನಾಟಕ ರಾಜ್ಯದ 475 ಸಿಬಿಎಸ್‌ಇ ಶಾಲೆಗಳ 4,500 ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಮೂರು ದಿನ ನಡೆಯುವ ಈ ಅಥ್ಲೆಟಿಕ್ಸ್ ಕ್ರೀಡಾಕೂಟದ ಕ್ರೀಡಾಪಟುಗಳಿಗೆ ಸಿಬಿಎಸ್‌ಇ ನಿಯಮಾನುಸಾರ ಊಟ–ಉಪಹಾರ ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.ಈ ಕ್ರೀಡಾಕೂಟದ ರುವಾರಿಗಳೂ ಆದ ಶಾಲೆಯ ಮುಖ್ಯಸ್ಥ ಮಂಜುನಾಥ ರಂಗರಾಜು ಅವರು ಕ್ರೀಡಾಕೂಟದ ಸಂಚಾಲಕರಾಗಿದ್ದಾರೆ. ಕ್ರೀಡಾಕೂಟದ ವೀಕ್ಷಕರಾಗಿ ಬಸವರಾಜ ಸಜ್ಜನರ್ ನಿಯುಕ್ತಗೊಂಡಿದ್ದಾರೆ.ಸಿಬಿಎಸ್‌ಇ ದಕ್ಷಿಣ ವಲಯ ಈಜು ಕ್ರೀಡಾಕೂಟ– 2024: ಸಿಬಿಎಸ್‌ಇ ದಕ್ಷಿಣ ವಲಯ ಈಜು ಕ್ರೀಡಾಕೂಟ– 2024 ಕೂಡ ಇದೇ 30 ರಿಂದ ನ.2 ರ ವರೆಗೆ ಇಲ್ಲಿಯೇ ಆಯೋಜನೆಗೊಂಡಿದೆ. ಈ ಕ್ರೀಡಾಕೂಟದಲ್ಲಿ ಕರ್ನಾಟಕ, ಮಹಾರಾಷ್ಟ್ರ, ಕೇರಳ, ಗೋವಾ, ಮತ್ತು ದಿವು–ದಾಮನ್,ನಗರ–ಹವೇಲಿ ಕೇಂದ್ರಾಡಳಿತ ಪ್ರದೇಶಗಳ 2,500 ಈಜು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ನಾಲ್ಕು ದಿನ ನಡೆಯುವ ಈಜು ಕ್ರೀಡಾಕೂಟದ ಕ್ರೀಡಾಪಟುಗಳಿಗೆ ಸಿಬಿಎಸ್‌ಇ ನಿಯಮಾನುಸಾರ ಊಟ–ಉಪಹಾರ ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.ಈ ಶಾಲೆಯ ಆವರಣದಲ್ಲಿ ಈಗಾಗಲೇ ಜಿಲ್ಲಾ ಮಟ್ಟದ, ರಾಜ್ಯ ಮಟ್ಟದ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳನ್ನು ಸಮರ್ಪಕವಾಗಿ, ಯಶಸ್ವಿಯಾಗಿ ಆಯೋಜಿಸಲಾಗಿದೆ ಎಂದು ಮಂಜುನಾಥ ರಂಗರಾಜು ತಿಳಿಸಿದ್ದಾರೆ.

### ಗೋಪನಹಳ್ಳಿ ಯಾದವ ನಗರದ ಕ್ರಾಸ್‌ಬಳಿ ಬೈಕ್‌ಗೆ ಬಸ್ ಡಿಕ್ಕಿ : ಬೈಕ್ ಸವಾರ ಸಾವು.



» ಚಳ್ಳಕೆರೆ



ತಾಲ್ಲೂಕಿನ ಗೋಪನಹಳ್ಳಿ ಕ್ರಾಸ್‌ನ ಯಾದವ ನಗರದ ಬಳಿ ಖಾಸಗಿ ಬಸ್ಸೊಂದು ಮೋಟಾರ್ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮವಾಗಿ ಬೈಕ್ ಚಾಲಕ ವೀರಸಾಬಿಹಳ್ಳಿಯ ನಾಗೇಗೌಡ(35) ಚಿಕಿತ್ಸೆ ಫಲಕಾರಿಯಾಗದೆ ಚಿತ್ರದುರ್ಗ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾನೆ. ಸದರಿ ಬಸ್ ಗೋಪನಹಳ್ಳಿಯಿಂದ ಚಳ್ಳಕೆರೆ ಕಡೆಗೆ ಬರುತ್ತಿದ್ದು, ನಾಗೇಗೌಡ ತನ್ನದೇಯಾದ ಬೈಕ್‌ನಲ್ಲಿ ಹೆಂಡತಿ ಕಾವ್ಯಳೊಂದಿಗೆ ಗೋಪನಹಳ್ಳಿ ಕಡೆಗೆ ಚಲಾಯಿಸುತ್ತಿದ್ದು, ಎದುರಿಗೆ ಬಂದ ಬಸ್ ಬೈಕ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ನಾಗೇಗೌಡ, ಕಾವ್ಯ ನೆಲಕ್ಕೆಬಿದಿದ್ದು ಕೂಡಲೇ ಅವರನ್ನು ಚಳ್ಳಕೆರೆ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ,ಹೆಚ್ಚಿನ ಚಿಕಿತ್ಸೆಗಾಗಿ ಚಿತ್ರದುರ್ಗದ ಬಸವೇಶ್ವರ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದು, ಪರೀಕ್ಷಿಸಿದ ವೈದ್ಯರು ನಾಗೇಗೌಡ ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಬಸ್ ಚಾಲಕ ಶ್ರೀನಿವಾಸನ ವಿರುದ್ದ ಪಿಎಸ್‌ಐ ಜೆ.ಶಿವರಾಜ್ ಪ್ರರಕರಣ ದಾಖಲಿಸಿದ್ಧಾರೆ.

### ಮಟ್ಕಾ ಚೀಟಿ ವ್ಯಕ್ತಿ ವಶಕ್ಕೆ

ನಗರದ ಎಪಿಎಂಸಿ ಕಚೇರಿಯ ಸಾರ್ವಜನಿಕ ರಸ್ತೆಯಲ್ಲಿ ಹಮಾಲಿ ಸಂಘದ ಕಚೇರಿಯಲ್ಲಿ ಕಾರ್ಯನಿರ್ವಹಿಸುವ ವೀರಣ್ಣ(70) ಎಂಬಾತನ ಹಾಡುಹಗಲೇ ಮಟ್ಕಾ ಚೀಟಿ ಬರೆಯುತ್ತಿದ್ದ ಹಿನ್ನೆಲೆಯಲ್ಲಿ ಆತನನ್ನು ವಶಕ್ಕೆ ಪಡೆದು ಮಟ್ಕಾ ಹಣ 3350ರೂಗಳನ್ನು ಪೊಲೀಸರು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಗಾಂಧಿನಗರದ ಬಾರ್‌ಬೈಂಡಿಕ್ ಕೆಲಸ ನಿರ್ವಹಿಸುವ ಅಬ್ದುಲ್ ವಹಾಬ್(30) ತನ್ನ ಕೈಗೆ ಆದ ನೋವಿನಿಂದ ಮಧ್ಯವೆಸನಿಯಾಗಿದ್ದು, ಅತಿಯಾದ ಕುಡಿತದಿಂದ ಹೆಂಡತಿ ಬೇಸತ್ತು ತವರಿಗೆ ತೆರಳಿದ್ದಳು. ನೊಂದ ಅಬ್ದುಲ್ ವಹಾಬ್ ತನ್ನ ಬಾಡಿಗೆ ಮನೆಯಲ್ಲೇ ನೇಣುಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುತ್ತಾನೆ. ಹೊಟ್ಟೆಪ್ಪನಹಳ್ಳಿ ಕ್ರಾಸ್ ಬಳಿ ಭತ್ತ ಕಟಾವು ಮಾಡುವ ಕಾರ್ಟರ್ ವಾಹನ ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ನಲ್ಲೂರಹಳ್ಳಿಯ ಚಿಕ್ಕಣ್ಣ(70) ಗಾಯಗೊಂಡಿರುತ್ತಾನೆ. ಬೈಕ್ ಜಖಂಗೊಂಡಿದ್ದು ಕಾರ್ಟರ್ ವಾಹನ ಚಾಲಕ ಸುಖಮುನಿ ವಿರುದ್ದ ದೂರು ನೀಡಿದ್ದು ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಚೆನ್ನಮ್ಮಾಜಿ ಹಾಕಿಕೊಟ್ಟ ದಾರಿಯಲ್ಲಿ ಸಾಗೋಣ

» ಚಿತ್ರದುರ್ಗ

ಕಿತ್ತೂರು ರಾಣಿ ಚೆನ್ನಮ್ಮ ಇಡೀ ಮಾನವ ಸಮಾಜಕ್ಕೆ ಹಾಕಿಕೊಟ್ಟ ದಾರಿಯಲ್ಲಿ ನಾವು ಮತ್ತು ನಮ್ಮ ಮಕ್ಕಳನ್ನು ನಡೆಸೋಣ, ನಮ್ಮ ಮಕ್ಕಳಲ್ಲಿಯೂ ಸ್ವಾಭಿಮಾನದ ಕಿಚ್ಚು, ಹೋರಾಟದ ಮನೋಭಾವ, ಎಲ್ಲರನ್ನೂ ಪ್ರೀತಿಸುವ ಪ್ರೀತಿ ಬೆಳೆಸೋಣ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ ಸಮಾರಂಭದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.ಸ್ವರಾಜ್ಯ ಮತ್ತು ಸ್ವಾತಂತ್ರ್ಯ ಇನ್ನೊಬ್ಬರ ಅಡಿಯಾಗಿರಬಾರದು ಎಂದು ನಂಬಿದ್ದ ಚೆನ್ನಮ್ಮ ತನ್ನ ಪ್ರಜೆಗಳ ಹಿತ ಕಾಯುವ ಸಂಕಲ್ಪ ತೊಟ್ಟು ಬದುಕಿದ ಏಕೈಕ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮ. ನಮ್ಮ ಮಕ್ಕಳಿಗೆ ಸ್ವಾಭಿಮಾನದ ಕಿಚ್ಚು, ಹೋರಾಟದ ಛಲ ಬರಬೇಕು. ಕಿತ್ತೂರು ರಾಣಿ ಚೆನ್ನಮ್ಮ ಅವರ ಸಂದೇಶ ಪಾಲನೆ ಮಾಡಬೇಕು.ಮಹನೀಯರನ್ನು ಯಾವುದೇ ಜಾತಿಗೆ ಸೀಮಿತಗೊಳಿಸುವುದು ಸರಿಯಲ್ಲ ಎಂದರು. ಸ್ವಾರ್ಥ ಮನೋಭಾವದಿಂದಾಗಿ ಪ್ರಸ್ತುತ ದಿನಗಳಲ್ಲಿ ಜಗತ್ತು ವಿನಾಶದ ಅಂಚಿಗೆ ಹೋಗುತ್ತಿದೆ. ಈ ಹಿನ್ನಲೆಯಲ್ಲಿ ಮಹನೀಯರ ಸಂದೇಶವನ್ನು ನೆನೆಯುವುದರ ಜೊತೆಗೆ ನಾವು ಮುಂದಿನ ಪೀಳಿಗೆಗೆ ಕೊಂಡೊಯ್ಯಬೇಕು ಎಂದರು. ನಿವೃತ್ತ ಉಪನ್ಯಾಸಕಿ ಸಿ.ಬಿ. ಶೈಲಾ ಜಯಕುಮಾರ್ ಮಾತನಾಡಿ, ಚೆನ್ನಮ್ಮ ಅವರು ಸ್ವಾಭಿಮಾನದಿಂದ, ಸ್ವಾತಂತ್ರ್ಯ, ಸ್ವಾಯತ್ತತೆ, ಸ್ವರಾಜ್ಯಕ್ಕಾಗಿ ಆತ್ಮ ವಿಶ್ವಾಸದಿಂದ ಆಂಗ್ಲರ ವಿರುದ್ದ ಹೋರಾಡಿದವರು, ಇಂತಹ ಚೆನ್ನಮ್ಮನನ್ನು ಬಹಳ ಪ್ರೀತಿ, ಗೌರವದಿಂದ ಸ್ಮರಿಸೋಣ ಎಂದು ಹೇಳಿದರು. ಭಾರತದಾದ್ಯಂತ ಪ್ರಪ್ರಥಮವಾಗಿ ಬ್ರಿಟೀಷರ ವಿರುದ್ಧ ಹೋರಾಟ ಮಾಡಿದ ಮಹಿಳೆ ಚೆನ್ನಮ್ಮ. ಚೆನ್ನಮ್ಮಾಜಿ ನಮ್ಮೆಲ್ಲರ ಬದುಕಿಗೆ ಸ್ಫೂರ್ತಿ. ಕಿತ್ತೂರು ರಾಣಿ ಚೆನ್ನಮ್ಮ ಅವರನ್ನು ಯಾವುದೇ ಜಾತಿ, ಧರ್ಮಕ್ಕೆ ಸೀಮಿತಗೊಳಿಸಬಾರದು. ಮಹನೀಯರು ಮನುಕುಲದ ಮಾದರಿಗಳು ಇವರು. ನಾವು ಹೇಗೆ ಬದುದಬೇಕು ಎಂಬ ಆದರ್ಶವನ್ನು ಕಲಿಸಿಕೊಟ್ಟವರು ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಸಮಾಜದ ಮುಖಂಡರಾದ ಮಹಡಿ ಶಿವಮೂರ್ತಿ, ಎನ್.ಬಿ.ವಿಶ್ವನಾಥ್, ಜಿ.ಎನ್.ಮಹೇಶ್, ಮೋಕ್ಷ ರುದ್ರಸ್ವಾಮಿ, ನಿರ್ಮಲ ಬಸವರಾಜ್, ರೀನಾ ವೀರಭದ್ರಪ್ಪ, ಸುಮಾ ರಾಜಶೇಖರ್, ಪರಮೇಶ್ವರ್, ಶಿವಪ್ರಕಾಶ್, ದಯಾನಂದ ಪಾಟೀಲ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪಾಪಯ್ಯ ಸೇರಿದಂತೆ ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಇದ್ದರು. ಗಾನಯೋಗಿ ಸಂಗೀತ ಬಳಗದ ತೋಟಪ್ಪ ಉತ್ತಂಗಿ ಗೀತಗಾಯನ ನಡೆಸಿಕೊಟ್ಟರು.

# ಶ್ರೀ ಅಹೋಬಲ ಟಿವಿಎಸ್‌ನಲ್ಲಿ ಮಂಗಳಮುಖಿಯರಿಂದ ಆಯುಧ ಪೂಜೆ





» ಚಿತ್ರದುರ್ಗ

ಚಿತ್ರದುರ್ಗ ತುರುವನೂರು ರಸ್ತೆಯಲ್ಲಿರುವ ಶ್ರೀಅಹೋಬಲ ಟಿವಿಎಸ್ ಮತ್ತು ಮೇದೇಹಳ್ಳಿ ರಸ್ತೆಯಲ್ಲಿರುವ ಶ್ರೀಅಹೋಬಲ ಸ್ಟೀಲ್ ಅಂಡ್ ಸಿಮೆಂಟ್ ನಲ್ಲಿ ಆಯುಧ ಪೂಜೆಯ ದಿನದಂದು ಮಂಗಳಮುಖಿಯರು ವಿಶೇಷ ಪೂಜೆ ಸಲ್ಲಿಸಿದರು.

ಪ್ರತಿಯೊಂದು ಶೋ ರೂಂ ಮತ್ತು ಅಂಗಡಿಗಳಲ್ಲಿ ಮಾಲೀಕರ ಕುಟುಂಬದವರು ಪೂಜೆ ಸಲ್ಲಿಸುವುದು ಸಾಮಾನ್ಯ ಆದರೆ ಪ್ರತಿ ವರ್ಷ ಸಹ ಈ ಶೋ ರೂಂನಲ್ಲಿ ಮಂಗಳಮುಖಿಯರು ಪೂಜೆ ಸಲ್ಲಿಸುತ್ತಾ ಬಂದಿದ್ದಾರೆ. ಒಬ್ಬರಲ್ಲ ಸುಮಾರು 25 ಮಂಗಳಮುಖಿಯರ ತಂಡ ಆಗಮಿಸಿ ಕಾರ್ಯಗಳನ್ನು ನೇರವೇರಿಸಿದೆ.

ಮಂಗಳಮುಖಿಯರು ಪೂಜೆ ಸಲ್ಲಿಸಿದರೆ ಅವರು ಹಾರೈಸಿದರೇ ಉತ್ತಮ ಬೆಳವಣಿಗೆಗೆ ಸಹಕಾರಿ , ವ್ಯಾಪರ ಉದ್ಯಮಗಳು ಅಭಿವೃದ್ಧಿ ಹೊಂದತ್ತವೆ ಎಂಬ ಪ್ರತೀತಿ ಮೊದಲಿನಿಂದಲೂ ಸಹ ಜನರಲ್ಲಿ ಒಂದು ನಂಬಿಕೆ ನೆಲೆಸಿದೆ. ಮಂಗಳಮುಖಿಯರು ರಸ್ತೆಯಲ್ಲಿ ಸಿಕ್ಕ ಕಡೆಯಲ್ಲಿ ಅವರಿಗೆ ಒಂದಿಷ್ಟು ಹಣ ಕೊಟ್ಟು ಅವರಿಂದ 1 ರೂಪಾಯಿ ಪಡೆಯುತ್ತಾರೆ. ಅವರು ಸಹ ಕೊಟ್ಟು ಆಶೀರ್ವಾದ ಮಾಡುತ್ತಾರೆ.ಇದು ಮೊದಲಿನಿಂದಲೂ ನಡೆದುಕೊಂಡು ಬಂದಿದೆ.

> **ಶ್ರೀ ಅಹೋಬಲ ಟಿವಿಎಸ್ ಮತ್ತು ಶ್ರೀ ಅಹೋಬಲ ಸ್ಟೀಲ್ ಅಂಡ್ ಸಿಮೆಂಟ್ ನಲ್ಲಿ ಪ್ರತಿ ವರ್ಷದಂತೆ ಈ ವರ್ಷ ಸಹ ಮಂಗಳ ಮುಖಿಯರು ಪೂಜೆ ಸಲ್ಲಿಸಿದ್ದು ನಮಗೆ ಒಳಿತಾಗಲಿದೆ ಎಂಬ ನಂಬಿಕೆ ನಮ್ಮದು.**
>
> » **ಪಿ.ವಿ.ಅರುಣ್ ಕುಮಾರ್**
> ಮಾಲೀಕರು ಶ್ರೀ ಅಹೋಬಲ ಟಿವಿಎಸ್

### ನಾಡಿನ ಜನರಿಗೆ ನೆಮ್ಮದಿ ಬದುಕು ನೀಡುವಂತೆ

# ದೇವಿ ಕನ್ನಿಕಾ ಪರಮೇಶ್ವರಿಯಲ್ಲಿ ಪ್ರಾರ್ಥನೆ: ಶಾಸಕ ರಘುಮೂರ್ತಿ



» ಚಳ್ಳಕೆರೆ

ತನ್ನನ್ನು ನಂಬಿದ ಭಕ್ತರಿಗೆ ಸದಾಕಾಲ ಶ್ರೇಯಸ್ಸುಂಟುಮಾಡುವ ಶ್ರೀಕನ್ನಿಕಾ ಪರಮೇಶ್ವರಿ ದೇವಿಯಲ್ಲಿ ಉತ್ತಮ ಮಳೆ, ಬೆಳೆ ನೀಡಿ ನೆಮ್ಮದಿ ಬದುಕನ್ನು ಎಲ್ಲರಿಗೂ ಕರುಣಿಸುವಂತೆ ಪ್ರಾರ್ಥಿಸಿರುವುದಾಗಿ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನವರಾತ್ರಿ ಉತ್ಸವ ಹಿನ್ನೆಲೆಯಲ್ಲಿ ಕನ್ನಿಕಾ ಪರಮೇಶ್ವರಿ ದೇವಸ್ಥಾನದಲ್ಲಿ ಆರ್ಯವೈಶ್ಯ ಸಂಘಟನೆಗಳ ಸಹಯೋಗದೊಂದಿಗೆ ಪ್ರತಿನಿತ್ಯ ದೇವಿಗೆ ವಿಶೇಷ ಅಲಂಕಾರಗಳೊಂದಿಗೆ ಪೂಜೆ ಸಲ್ಲಿಸುತ್ತಿದ್ದು, ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿ ನಂತರ ನೆರೆದಿದ್ದ ಭಕ್ತರನ್ನು ಉದ್ದೇಶಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ನಾವೆಲ್ಲರೂ ದೇವರ ಮೇಲೆ ಅಪಾರವಾದ ಭಕ್ತಿಶ್ರದ್ದೆಯಿಂದಲೇ ಬದುಕನ್ನು ರೂಪಿಸಿಕೊಂಡವರು. ದೇವರನ್ನು ನಂಬಿ ಪೂಜಿಸಿದ ಭಕ್ತರಿಗೆ ದೇವರು ಸದಾಕಾಲ ಒಳಿತನ್ನು ಮಾಡುತ್ತಾನೆ. ಹಲವಾರು ಸಂದರ್ಭಗಳಲ್ಲಿ ಈ ಮಾತು ನಿಜವಾಗಿದೆ. ನಾನು ಸಹ ಈ ಕ್ಷೇತ್ರದ ಶಾಸಕನಾಗಿ ಕ್ಷೇತ್ರದ ಹಲವಾರು ದೇವಸ್ಥಾನಗಳಿಗೆ ಸೌಲಭ್ಯಗಳನ್ನು ಒದಗಿಸಿದ್ದೇನೆ ಇದಕ್ಕೆಲ್ಲಾ ದೇವಿ ಶ್ರೀಕನ್ನಿಕಾ ಪರಮೇಶ್ವರಿ ಅನುಗ್ರಹವೇ ಕಾರಣ ಎಂದರು. ಜಿಲ್ಲಾ ಆರ್ಯವೈಶ್ಯ ಸಂಘದ ಅಧ್ಯಕ್ಷ, ತಾಲ್ಲೂಕು ಆರ್ಯವೈಶ್ಯ ಸಂಘಟನೆಗಳ ಕಾರ್ಯದರ್ಶಿ ಎ.ಎನ್.ಚಿದಾನಂದಗುಪ್ತ, ಜಿಲ್ಲಾ ಖಜಾಂಚಿ ಸಿ.ಎಸ್.ಪ್ರಸಾದ್, ಆರ್ಯವೈಶ್ಯ ಸಂಘದ ಅಧ್ಯಕ್ಷ ಪಿ.ಎಂ.ಕೃಷ್ಣಮೂರ್ತಿ, ಆರ್ಯವೈಶ್ಯ ಯುವ ಘಟಕದ ಅಧ್ಯಕ್ಷ ಆರ್.ಚೇತನ್‌ಕುಮಾರ್, ಉಪಾಧ್ಯಕ್ಷ ಪಿ.ಆರ್.ಪದ್ಮನಾಭ, ಮಹಿಳಾ ಸಂಘದ ಕಾರ್ಯದರ್ಶಿ ಲತಾಬಾಬು, ಯುವ ಘಟಕದ ಉಪಾಧ್ಯಕ್ಷ ಕಾರ್ತಿಕ್‌ಅನಂತ್, ಕಾರ್ಯದರ್ಶಿ ಟಿ.ಬಿ.ಅಭಿಷೇಕ್, ಹಿರಿಯ ಸಹಕಾರಿ ದುರೀಣ ಸಿ.ಬಿ.ಆದಿಭಾಸ್ಕರಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು. ಹಿನ್ನೆಲೆಯಲ್ಲಿ ಕನ್ನಿಕಾ ಪರಮೇಶ್ವರಿ ದೇವಸ್ಥಾನಕ್ಕೆ ಶಾಸಕ ಟಿ.ರಘುಮೂರ್ತಿ ಭೇಟಿ ನೀಡಿ ದೇವರ ದರ್ಶನ ಪಡೆದರು.

### ಮುರುಘಾ ಮಠದಲ್ಲಿ ಶೂನ್ಯ ಪೀಠಾರೋಹಣ

» ಚಿತ್ರದುರ್ಗ

ಶರಣ ಸಂಸ್ಕೃತಿ ಉತ್ಸವದ ಅಂಗವಾಗಿ ಅ.25 ರಂದು ಬೆಳಿಗ್ಗೆ 10 ಗಂಟೆಗೆ ಮುರುಘಾ ಮಠದಲ್ಲಿ ಶೂನ್ಯ ಪೀಠಾರೋಹಣ ಹಾಗೂ 11 ಗಂಟೆಗೆ ಶ್ರೀಮಠದ ಆವರಣದಲ್ಲಿ ಧರ್ಮಗುರು ಬಸವಣ್ಣನವರ ಮತ್ತು ಶೂನ್ಯ ಪೀಠದ ಪ್ರಥಮ ಅಧ್ಯಕ್ಷ ಅಲ್ಲಮ ಪ್ರಭುದೇವರ ಭಾವಚಿತ್ರ ಹಾಗೂ ಪ್ರಾಚೀನ ಹಸ್ತಪ್ರತಿಗಳ ಮೆರವಣಿಗೆ ನಡೆಯಲಿದೆ.ಮಧ್ಯಾಹ್ನ 12 ಗಂಟೆಗೆ ಶ್ರೀ ಜಗದ್ಗುರುಜಯದೇವ ಜಂಗೀ ಕಕುಸ್ತಿ ಜರುಗಲಿದ್ದು, ಕಾರ್ಯಕ್ರಮದಲ್ಲಿ ಹಾವೇರಿ ಶ್ರೀ ಹೊಸಮಠದ ಶ್ರೀ ನಿ.ಪ್ರ.ಸ್ವ ಬಸವ ಶಾಂತಲಿಂಗ ಸ್ವಾಮಿಗಳು, ಚಿತ್ರದುರ್ಗದ ಶ್ರೀ ಮೇದಾರಕೇತೇಶ್ವರಗುರುಪೀಠದ ಶ್ರೀ ಇಮ್ಮಡಿ ಬಸವ ಕೇತೇಶ್ವರ ಸ್ವಾಮಿಗಳು, ಹೊಳವನಹಳ್ಳಿ ಶ್ರೀ ಪುಟ್ಟೇಶ್ವರಸ್ವಾಮಿ ಮಠದ ಶ್ರೀ ತಿಪ್ಪೇರುದ್ರಸ್ವಾಮಿಗಳು ಸಮ್ಮುಖವಹಿಸುವರು.

## ಪ್ರಮುಖ ಸುದ್ದಿ

# ಕ್ರೀಡಾ ಕೋಟಾದಡಿ ಕೆಲಸ ಕೊಡಿಸುವುದಾಗಿ ವಂಚಿಸುತ್ತಿದ್ದ ಯುವತಿ ಸೇರಿ ಮಾಜಿ ಸೈನಿಕನ ಬಂಧನ

» ಹೊಸದುರ್ಗ

ಸೇನೆ ಹಾಗೂ ರೇಲ್ವೆ ಇಲಾಖೆಯಲ್ಲಿ ಗ್ರಾಮೀಣ ಯುವಕರಿಗೆ ಕ್ರೀಡಾ ಕೋಟಾದಲ್ಲಿ ಉದ್ಯೋಗ ಕೊಡಿಸುವುದಾಗಿ ನಂಬಿಸಿ, ಸುಮಾರು 16 ಲಕ್ಷಕ್ಕೂ ಹೆಚ್ಚು ಹಣ ಪಡೆದು ಮೋಸ ಮಾಡಿರುವ ಪ್ರಕರಣ ತಾಲೂಕಿನ ಶ್ರೀರಾಂಪುರದಲ್ಲಿ ಬೆಳಕಿಗೆ ಬಂದಿದೆ.

ಈಘಟನೆಗೆಸಂಭಂದಿಸಿದಂತೆಶಿವರಾಜ್ (45) ಹಾಗೂ ಭೀಮವ್ವ ಎಂಬುವವರ ಮೇಲೆ ಶ್ರೀರಾಂಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಇಬ್ಬರನ್ನು ಶ್ರೀರಾಂಪುರ ಪೊಲೀಸರು ಬಂಧಿಸಿದ್ದಾರೆ.

ಘಟನೆ ವಿವರ: ಸೇನೆಯಲ್ಲಿ ಕೆಲಸ ಮಾಡುತ್ತಿದ್ದ ಹುಬ್ಬಳ್ಳಿ ಮೂಲದ ಶಿವರಾಜ್ ಎಂಬಾತ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿ ಸೇನೆಯಿಂದ ವಜಾಗೊಂಡಿದ್ದ. ನಂತರ ಶ್ರೀರಾಂಪುರ ಸಮೀಪದ ಗವಿರಂಗಾಪುರ ಬೆಟ್ಟದಲ್ಲಿ ಸ್ಥಗಿತಗೊಂಡಿರುವ ಖಾಸಗಿ ಶಾಲಾ ಕಟ್ಟಡವನ್ನು ಬಾಡಿಗೆ ಪಡೆದು ಅಲ್ಲಿ ಶಿವಾಜಿ ರಾಜ್ ಕ್ರೀಡೆ ಮತ್ತು ಸ್ಪರ್ಧಾತ್ಮಕ ಅಕಾಡೆಮಿ ನಡೆಸುತ್ತಿರುವುದಾಗಿ ಹೇಳಿಕೊಂಡಿದ್ದ., ಇದರಲ್ಲಿ ತರಬೇತಿ ಪಡೆದವರಿಗೆ ಕ್ರೀಡಾ ಕೋಟಾದಲ್ಲಿ ಸೇನೆ ಮತ್ತು ರೇಲ್ವೆ ಇಲಾಖೆಯಲ್ಲಿ ಕೆಲಸ ಕೊಡಿಸುವುದಾಗಿ ನಂಬಿಸಿ ಅವರಿಂದ 10 ಸಾವಿರದಿಂದ 2 ಲಕ್ಷದವರೆಗೂ ಹಣ ಪೀಕಿದ್ದಾನೆ. ಯುವಕರಿಂದ ಪಡೆದ ಹಣವನ್ನು ಈತನ ಜತೆ ಕೈ ಜೋಡಿಸಿದ್ದ ಭೀಮವ್ವ ಎನ್ನುವವರ ಬ್ಯಾಂಕ್ ಖಾತೆಗೆ ಹಾಕಿಸಿಕೊಂಡು ಇಬ್ಬರೂ ಐಷಾರಾಮಿ ಜೀವನ ನಡೆಸುತ್ತಿದ್ದರು ಎನ್ನಲಾಗಿದೆ.

ಈತನ ನಡವಳಿಕೆ ಬಗ್ಗೆ ಅನುಮಾನ ಬಂದ ಕೆಲ ಯುವಕರು ಮೊದಲು ನಮಗೆ ಕೆಲಸದ ಭರವಸೆ ಕೊಡಿಸಿ ನಂತರ ಹಣ ಕೊಡುತ್ತೇವೆ ಎಂದು ಹೇಳಿದ್ದಾರೆ. ಕೆಲ ಯುವಕರನ್ನು ಕರೆದುಕೊಂಡು ಕಳೆದ ತಿಂಗಳು ಬೆಂಗಳೂರಿನ ಸೇನಾ ಕಚೇರಿಗೆ ಕರೆದುಕೊಂಡು ಹೋಗಿದ್ದಾನೆ. ಆಗ ಯುವಕರನ್ನು ಕಚೇರಿಯ ಹೊರಗೆ ನಿಲ್ಲಿಸಿ ನಾನು ಅಧಿಕಾರಿಗಳೊಂದಿಗೆ ಮಾತನಾಡಿಕೊಂಡು ಬರುತ್ತೇನೆ ಎಂದು ಹೇಳಿ ಶಿವರಾಜ್ ಕಛೇರಿ ಒಳಗೆ ಹೋಗಿದ್ದಾನೆ. ಆಗ ಹೊರಗಡೆ ಹೋಗಿದ್ದ ಸೇನಾ ಇಲಾಕೆಯ ಅಧಿಕಾರಿಗಳು ಹೊರಗಡೆ ಯುವಕರ ಗುಂಪು ನಿಂತಿರುವುದನ್ನು ಕಂಡು ಏಕೆ ನಿಂತಿದ್ದೀರೀ ಎಂದು ಪ್ರಶ್ನಿಸಿದಾಗ ಕೆಲಸದ ಬಗ್ಗೆ ಮಾತನಾಡಿದ್ದಾರೆ. ಆಗ ಅವರ ಬಳಿ ಮಾಹಿತಿ ಪಡೆದ ಸೇನಾ ಅಧಿಕಾರಿಗಳು



ಶಿವರಾಜ್ ಪೂರ್ವಾಪರ ಜಾಲಾಡಿ ಈತ ಒಬ್ಬ ಫ್ರಾಡ್ ಎಂದು ಹೇಳಿ ಯುವಕರಿಗೆ ತಿಳಿಸಿ ಪೊಲೀಸರಿಗೆ ದೂರು ನೀಡುವಂತೆ ಸೂಚಿಸಿದ್ದಾರೆ .

ಈತನ ಬಂಡವಾಳ ತಿಳಿಯುತ್ತಿದ್ದಂತೆ ಅಲ್ಲಿಂದ ವಾಪಾಸ್ಸಾದ ಯುವಕರು ಶ್ರೀರಾಂಪುರ ಪೊಲೀಸರಿಗೆ ದೂರು ನೀಡಿದ್ದಾರೆ. ಯುವಕರ ದೂರಿನ ಮೇರೆಗೆ ಶಿವರಾಜ್ ಹಾಗೂ ಇತರರನ್ನು ಬಂಧಿಸಿರುವ ಶ್ರೀರಾಂಪುರ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಈತನ ಮೋಸದ ಜಾಲಕ್ಕೆ ಸಿಲುಕಿರುವವರು ಯಾರಾದರೂ ಇದ್ದರೆ ದೂರು ನೀಡುವಂತೆ ಹಾಗೂ ಇಂತಹ ಅಕಾಡೆಮಿಗಳ ಬಗ್ಗೆ ಪೂರ್ವಾಪರ ತಿಳಿಯದೆ ಈ ರೀತಿ ಮೋಸ ಹೋಗದಂತೆ ಶ್ರೀರಾಂಪುರ ಠಾಣೆ ಪಿಎಸ್‌ಐ ಮಧುಕುಮಾರ್ ತಿಳಿಸಿದ್ದಾರೆ.

ಒಂದು ಕೋಟಿ ರುಪಾಯಿಗೂ ಅಧಿಕ ಹಣ ವಂಚನೆ: ಸೇನೆಯಲ್ಲಿ ಕೆಲಸ ಕೊಡಿಸುವುದಾಗಿ ಹೇಳಿಕೊಂಡು ಸೇನೆಯಿಂದ ವಜಾಗೊಂಡಿರುವ ಶಿವರಾಜ್ ಎಂಬಾತ ಶ್ರೀರಾಂಪುರದಲ್ಲಿ ಕ್ರೀಡಾ ಅಕಾಡೆಮಿ ಮಾಡಿಕೊಂಡು ಸುಮಾರು 150ಕ್ಕೂ ಹೆಚ್ಚು ಯುವಕರಿಂದ ಒಂದು ಕೋಟಿಗೂ ಅಧಿಕ ಮೊತ್ತದಲ್ಲಿ ಹಣ ಲಪಟಾಯಿಸಿ, ಮೋಸ ಮಾಡಿರುವುದಾಗಿ ಮಿಲಿಟರಿ ಇಂಟಲೆಜೆನ್ಸಿ ಅಧಿಕಾರಿ ರಾಹುಲ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಈ ಬಗ್ಗೆ ಯುವಕರು ಕಳೆದ 2 ತಿಂಗಳ ಹಿಂದೆಯೇ ಪೊಲೀಸರಿಗೆ ದೂರು ನೀಡಲು ಮುಂದಾಗಿದ್ದಾರೆ. ಆದರೆ ಈ ಬಗ್ಗೆ ಪೊಲೀಸರು ದೂರು ಸ್ವೀಕರಿಸಿರಲಿಲ್ಲ. ಹಾಗಾಗಿ ಯುವಕರು ನೀಡಿದ ಮಾಹಿತಿ ಆಧಾರದ ಮೇರೆಗೆ ಆತನನ್ನು ಶ್ರೀರಾಂಪುರ ಪೊಲೀಸರು ಹಾಗೂ ಮಿಲಟರಿ ಇಂಟಲಿಜೆನ್ಸಿ ಅಧಿಕಾರಿಗಳು ಜಂಟಿಯಾಗಿ ಸೇರಿಕೊಂಡು ಆತನನ್ನು ಶಿಗ್ಗಾವಿಯಲ್ಲಿ ಬಂಧಿಸಿರುವುದಾಗಿ ತಿಳಿಸಿದರು.

ಸೇನೆಯಲ್ಲಿ 3 ವರ್ಷ ಕೆಲಸ ಮಾಡಿದ್ದ ಶಿವರಾಜ್, ಕ್ರಿಮಿನಲ್ ಪ್ರಕರಣದಲ್ಲಿ ಸಿಲುಕಿ ಕೆಲಸದಿಂದ ವಜಾಗೊಂಡಿದ್ದ. ಹುಬ್ಬಳ್ಳಿ ಮೂಲದ ಈತ ಶ್ರೀರಾಂಪುರದಲ್ಲಿದ್ದ ಭೀಮವ್ವ ಎಂಬ ಮಹಿಳೆಯೊಂದಿಗೆ ಸೇರಿಕೊಂಡು ಸಮೀಪದ ಬೆಟ್ಟದ ತಪ್ಪಲಿನ ಕಟ್ಟಡವೊಂದರಲ್ಲಿ ನಕಲಿ ದಾಖಲೆ ಸೃಷ್ಟಿಸಿ ಅಕಾಡೆಮಿ ನಡೆಸುತ್ತಿರುವುದಾಗಿ ದಾವಣಗೆರೆ, ಚಿತ್ರದುರ್ಗ ಹಾಗೂ ಹಾವೇರಿ ಬಾಗಗಳಿಂದಲೂ ಯುವಕರಿಗೆ ನಂಬಿಸಿ ಯುವಕರಿಂದ ಸುಮಾರು ಒಂದು ಕೋಟಿಗೂ ಅಧಿಕ ಹಣ ಪಡೆದಿರುವ ಬಗ್ಗೆ ಮಾಹಿತಿ ಇದೆ ಎಂದು ತಿಳಿಸಿದರು.

ಈತ ಶಿಗ್ಗಾವಿಯಲ್ಲಿ ಇಂತಹುದೆ ಮತ್ತೊಂದು ನಕಲಿ ಅಕಾಡೆಮಿ ತೆರೆದಿದ್ದು, ಯುವಕರು ಇಂತಹ ಮೋಸದ ಜಾಲಕ್ಕೆ ಸಿಲುಕಬಾರದು. ಈ ಬಗ್ಗೆ ಯುವಕರು ಜಾಗ್ರತೆ ವಹಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

## ಫಾಸ್ಟ್ ನ್ಯೂಸ್

### ಹೆಣ್ಣಿನ ಹಸ್ತಕ್ಷೇಪದಿಂದ ರಾಜ್ಯ ರಾಜಕೀಯ ಏರುಪೇರಾಗುವ ಸಾಧ್ಯತೆ ಕಾರ್ಣಿಕಾ ನುಡಿದ ಗೊರವಯ್ಯ



» **ಹಾವೇರಿ**


ಅಕ್ಟೋಬರ್ 'ಮುಕ್ಕೋಟಿ ಚೆಲ್ಲಿತಲೇ ಕಲ್ಯಾಣ ಕಟ್ಟಿತಲೇ ಪರಾಕ್' ಎಂದು ಜಿಲ್ಲೆಯ ರಾಣೆಬೆನ್ನೂರು ತಾಲೂಕಿನ ಸುಕ್ಷೇತ್ರ ದೇವರಗುಡ್ಡದ ಮಾಲತೇಶ ದೇವರ ಕಾರ್ಣಿಕ (karnika bavishya) ನುಡಿಯಲಾಗಿದೆ. ನಾಗಪ್ಪಜ್ಜ ಉರ್ಮಿ ಗೊರವಯ್ಯಾ ನುಡಿದ ಕಾರ್ಣಿಕವನ್ನು ಬಳಿಕ ದೇಗುಲದ ಪ್ರಧಾನ ಅರ್ಚಕ ಸಂತೋಷ ಭಟ್ ವಿಶ್ಲೇಷಿಸಿದ್ದು, ಮುಕ್ಕೋಟಿ ಚಲ್ಲಿತಲೇ ಅಂದರೆ ರೈತರು ಕೋಟ್ಯಂತರ ರೂ. ಭೂಮಿಗೆ ಹಾಕುತ್ತಾರೆ. ರೈತರಿಗೆ ಲಾಭವಾಗುವ ನಿರೀಕ್ಷೆಗಳು ಕಡಿಮೆ. ಕಲ್ಯಾಣಿ ಕಕ್ಕಿತಲೆ ಅಂದರೆ ರಾಜ್ಯ ಸರ್ಕಾರಕ್ಕೆ ಆಪತ್ತು ಬರುವ ಸಾಧ್ಯತೆ. ಒಂದು ಹೆಣ್ಣಿನ ಹಸ್ತಕ್ಷೇಪದಿಂದ ರಾಜ್ಯ ರಾಜಕೀಯ ಏರುಪೇರಾಗುವ ಸಾಧ್ಯತೆ ಎಂದು ಕಾರ್ಣಿಕ ವಿಶ್ಲೇಷಿಸಿದ್ದಾರೆ. ಪ್ರತಿ ವರ್ಷ ದಸರಾ ಹಬ್ಬದ ಆಯುಧ ಪೂಜೆಯಂದು ಕಾರ್ಣಿಕ ನುಡಿಯಲಾಗುತ್ತದೆ. ಒಂಬತ್ತು ದಿನ ಉಪವಾಸವಿದ್ದು ಗೊರವಯ್ಯಾ ಕಾರ್ಣಿಕ ನುಡಿಯುತ್ತಾರೆ. ಬಿಲ್ಲನ್ನೇರಿ ಪ್ರಸಕ್ತ ವರ್ಷದ ಕಾರ್ಣಿಕವನ್ನು ಗೊರವಪ್ಪ ನುಡಿದಿದ್ದಾರೆ. ಮಾಲತೇಶ ದೇವರ ಕಾರ್ಣಿಕೋತ್ಸವದಲ್ಲಿ ಸಾವಿರಾರು ಭಕ್ತರು ಭಾಗಿ ಆಗಿದ್ದರು.

### ರಾಜ್ಯ ಸರ್ಕಾರ ಅಪ್ಪು ಹೆಸರಿನಲ್ಲಿ ಐ ಬ್ಯಾಂಕ್ ತೆರೆಯಲು ಸಿದ್ಧತೆ



» **ಬೆಂಗಳೂರು**

ಪುನೀತ್ ರಾಜ್ ಕುಮಾರ್ ಅಭಿಮಾನಿಗಳಿಗೆ ಸಿಹಿ ಸುದ್ದಿಯೊಂದು ಹೊರಬಿದ್ದಿದೆ. ಹೌದು. . . ರಾಜ್ಯ ಸರ್ಕಾರ ಅಪ್ಪು ಹೆಸರಿನಲ್ಲಿ ಐ ಬ್ಯಾಂಕ್ ತೆರೆಯಲು ಸಿದ್ಧತೆ ಮಾಡಿಕೊಂಡಿದೆ. ದಿನದಿಂದ ದಿನಕ್ಕೆ ದೃಷ್ಟಿ ದೋಷದಿಂದ ಬಳಲುತ್ತಿರುವ ಸಂಖ್ಯೆ ಹೆಚ್ಚಾಗುತ್ತಿದೆ. ಅನೇಕ ಕಾರಣಗಳಿಂದ ಕಣ್ಣು ಕಳೆದುಕೊಂಡವರು, ಇದೀಗ ಜಗತ್ತನ್ನ ನೋಡಲು ಕಾಯುತ್ತಿದ್ದಾರೆ. ಇಂತವರಿಗೆ ದೃಷ್ಟಿ ಭಾಗ್ಯ ಕಲ್ಪಿಸಲೆಂದೇ ಆರೋಗ್ಯ ಇಲಾಖೆ ನೇತ್ರದಾನ ಹೆಚ್ಚಿಸಲು ಪ್ಲಾನ್ ಮಾಡಿಕೊಂಡಿದೆ. ಹೀಗಾಗಿ ಡಾ.ಪುನೀತ್ ರಾಜ್ ಕುಮಾರ್ ಹೆಸರಲ್ಲಿ ಐ ಬ್ಯಾಂಕ್ ತೆರೆಯಲು ಸಿದ್ಧತೆ ಮಾಡಿಕೊಂಡಿದೆ. 2021ರ ಅಕ್ಟೋಬರ್ ನಿಂದ ಇಲ್ಲಿಯವರೆಗೆ ನಾರಾಯಣ ನೇತ್ರಾಲಯದಲ್ಲಿ ನೋಂದಣಿ ಮಾಡ್ಕೊಂಡವರ ಸಂಖ್ಯೆ 1 ಲಕ್ಷದ 40 ಸಾವಿರಕ್ಕೂ ಅಧಿಕ ಎಂಬ ಮಾಹಿತಿಯಿದೆ. ಈ ಕಾರಣದಿಂದ ಅಪ್ಪು ಹೆಸರಲ್ಲಿಯೇ ಐ ಬ್ಯಾಂಕ್ ತೆರೆಯಲು ಸರ್ಕಾರ ಸಿದ್ಧತೆ ಮಾಡಿಕೊಂಡಿದೆ.



**ಹಿರಿಯೂರು ನಗರದ ಸುಪ್ರಸಿದ್ಧ ಶ್ರೀ ಕರುಮಾರಿಯಮ್ಮ ದೇವಾಲಯದಲ್ಲಿ ಪ್ರತಿದಿನ ನವರಾತ್ರಿ ಪೂಜೆ ನಡೆಯುತ್ತಿದ್ದು ಚಿತ್ರದುರ್ಗ ಜಿಲ್ಲೆ ಉಸ್ತುವಾರಿ ಸಚಿವರು ಹಾಗೂ ಯೋಜನೆ ಮತ್ತು ಸಾಂಖ್ಯಿಕ ಖಾತೆಯ ಸಚಿವರಾದ ಡಿ ಸುಧಾಕರ್ ಭೇಟಿ ನೀಡಿ ವಿಶೇಷ ಪೂಜೆಯಲ್ಲಿ ಭಾಗವಹಿಸಿದ್ದರು.**

### ನಗರದ ಬನ್ನಿಮಂಟಪದಲ್ಲಿ ಸಾರಾರು ಭಕ್ತರ ಸಮ್ಮುಖದಲ್ಲಿ ದಸರಾ ಹಬ್ಬದ ಅಂಬಿನೋತ್ಸವ

# ವೈಭವದ ನವರಾತ್ರಿ ಉತ್ಸವಕ್ಕೆ ತೆರೆ

» **ಚಳ್ಳಕೆರೆ**

ಕಳೆದ ಒಂಭತ್ತು ದಿನಗಳಿಂದ ನವರಾತ್ರಿ ಉತ್ಸವ ಹಿನ್ನೆಲೆಯಲ್ಲಿ ನಗರದ ವಿವಿಧ ದೇವಸ್ಥಾನಗಳಲ್ಲಿ ಪೂಜಾಪುನಸ್ಕಾರಗಳು ಯಶಸ್ವಿಯಾಗಿ ನಡೆದಿದ್ದು, ಮಂಗಳವಾರ ಸಂಜೆ ಸುಮಾರು 6.10ರ ಸಮಯದಲ್ಲಿ ಬಳ್ಳಾರಿ ರಸ್ತೆಯ ಬನ್ನಿಮಂಟಪದ ಮೈದಾನದಲ್ಲಿ ಗ್ರಾಮ ದೇವರಾದ ಶ್ರೀವೀರಭದ್ರಸ್ವಾಮಿ, ಶ್ರೀಚಳ್ಳಕೆರೆಯಮ್ಮ, ಶ್ರೀಉಡಸಲಮ್ಮ ದೇವರುಗಳ ಸಮ್ಮುಖದಲ್ಲಿ ಪುರಂತಪ್ಪನ ವೀರನಾಟ್ಯದೊಂದಿಗೆ ಅಂಬು ಕಡಿಯುವ ಮೂಲಕ ವೈಭವನದ ದಸರಾಕ್ಕೆ ತೆರೆ ಎಳೆಯಲಾಯಿತು.





ಪ್ರತಿವರ್ಷದಂತೆ ಈ ವರ್ಷವೂ ಬನ್ನಿಮಂಟಪದ ಸುತ್ತ ನಗರದ ವಿವಿಧೆಡೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ನವರಾತ್ರಿ ಉತ್ಸವಕ್ಕೆ ಉತ್ಸಾಹ ತುಂಬಿದರು. ಮೂರು ಗ್ರಾಮ ದೇವರುಗಳು ಮಂಗಳವಾದ್ಯಗಳೊಂದಿಗೆ ಚಳ್ಳಕೆರೆಯಮ್ಮ ದೇವಸ್ಥಾನದ ಸನ್ನಿಧಿಯ ಮೂಲಕ ಮೆರವಣಿಗೆ ಆರಂಭಿಸಿ ಬನ್ನಿಮಂಟಪ ತಲುಪಲಾಯಿತು. ಪದ್ಧತಿಯಂತೆ ಭವ್ಯವಾದ ಮೆರವಣಿಗೆಯಲ್ಲಿ ಮೊದಲು ಬಸವಣ್ಣ, ಪುರಂತಪ್ಪ, ಚಳ್ಳಕೆರೆಯಮ್ಮ, ಉಡಸಲಮ್ಮ, ವೀರಭದ್ರಸ್ವಾಮಿ ದೇವರಗಳು ಭಕ್ತರ ಜೈಯಕಾರದೊಂದಿಗೆ ಸಾಗಿದವು. ದಾರಿಯುದ್ದಕ್ಕೂ ಜನರು ದೇವರ ದರ್ಶನ ಪಡೆದು ಕೈಮುಗಿದು ಪ್ರಾರ್ಥಿಸಿದರು. ಇದೇ ಸಂದರ್ಭದಲ್ಲಿ ಪೊಲೀಸರು ದಸರಾ ಹಬ್ಬದ ಹಿನ್ನೆಲೆಯಲ್ಲಿ ದೇವರಗಳ ಮೆರವಣಿಗೆಗೆ ತೊಂದರೆಯಾಗದಂತೆ ಸಂಚಾರವನ್ನು ನಿಯಂತ್ರಿಸಿ ಭಕ್ತರಿಗೆ ಬನ್ನಿಮುಡಿಯುವ ಕಾರ್ಯಕ್ರಮಕ್ಕೆ ಸಹಕಾರ ನೀಡಿದರು.

ಬನ್ನಿಮಂಟಪದಲ್ಲಿ ಪದ್ಧತಿಯಂತೆ ಬನ್ನಿಮಂಟಪಕ್ಕೆ ಮೂರು ದೇವರುಗಳ ಸಮ್ಮುಖದಲ್ಲಿ ವಿಶೇಷ ಪೂಜೆಯನ್ನು ಸಲ್ಲಿಸಲಾಯಿತು. ಪೂಜೆ ಮಹಾಮಂಗಳಾರತಿ ನಂತರ ಪುರಂತಪ್ಪನವರ ವೀರನಾಟ್ಯ ಪ್ರಾರಂಭವಾಗಿ ಕೆಲವು ನಿಮಿಷಗಳ ನಂತರ ಸಂಜೆ ಸುಮಾರು 5.58ಕ್ಕೆ ಅಂಬುಕಡಿಯುವ ಮೂಲಕ ದಸರಾ ಹಬ್ಬಕ್ಕೆ ತೆರೆಎಳೆಯಲಾಯಿತಲ್ಲದೆ, ನೆರೆದಿದ್ದ ಸಾವಿರಾರು ಭಕ್ತರು ಜಯಕಾರ ಹಾಕಿದರು.

ಅಂಬಿನೋತ್ಸವದ ನಂತರ ಬನ್ನಿಯನ್ನು ದೇವರಿಗೆ ಸಮರ್ಪಿಸಿ ಪೂಜೆ ಸಲ್ಲಿಸಿ ಭಕ್ತರಿಗೆ ವಿತರಣೆ ಮಾಡಲಾಯಿತು. ಪೂಜೆಯ ಬನ್ನಿ ಪಡೆದ ಭಕ್ತರು ಅದನ್ನು ಎಲ್ಲರಿಗೂ ವಿತರಿಸಿ ದಸರಾ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಎಲ್ಲರೂ ಪರಸ್ಪರ ಬನ್ನಿ ನೀಡುವ ಮೂಲಕ ವಿಶ್ವಾಸ ವೃದ್ಧಿಗಾಗಿ ಪ್ರಾರ್ಥಿಸಿದರು. ಶಾಸಕರ ಪರವಾಗಿ ಅವರ ಸಹೋದರ ಟಿ.ತಿಪ್ಪೇಸ್ವಾಮಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ನಗರಸಭಾ ಸದಸ್ಯರಾದ ವೆಂಕಟೇಶ್, ಸುಮಾಭರಮಣ್ಣ, ಮಾಜಿ ಪುರಸಭಾ ಸದಸ್ಯ ಎಚ್.ವಿ.ಪ್ರಸನ್ನಕುಮಾರ್, ವಾಣಿಜ್ಯೋದ್ಯಮಿಗಳಾದ ಕೆ.ಎಂ. ಕೊಟ್ರೇಶ್, ಶಿವಕುಮಾರ್, ಅರವಿಂದ್ ಮುಂತಾದವರು ಭಾಗವಹಿಸಿದ್ದರು.

## ವಿಜಯದಶಮಿಯ ಪ್ರಯುಕ್ತ ರಾಜ್ಯದ ಜನತೆಗೆ ಶುಭ ಕೋರಿದ ಸಿಎಂ ಸಿದ್ದರಾಮಯ್ಯ





» **ಮೈಸೂರು**

ಕನ್ನಡ ನಾಡಿನ ಜನರಿಗೆ ದಸರಾ ಮಹೋತ್ಸವ ವಿಜಯದಶಮಿಯ ಶುಭಾಶಯಗಳನ್ನು ಕೋರಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ಮಳೆ ಬೆಳೆಯಾಗಿ, ರಾಜ್ಯ ಸುಭೀಕ್ಷವಾಗಲಿ ಎಂದು ಚಾಮುಂಡೇಶ್ವರಿ ತಾಯಿಯನ್ನು ಪ್ರಾರ್ಥಿಸುವುದಾಗಿ ತಿಳಿಸಿದರು. ಅವರು ಇಂದು ಮೈಸೂರಿನ ತಮ್ಮ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಇಂದು ವಿಜಯದಶಮಿ ಹಬ್ಬ. ಮಧ್ಯಾಹ್ನ ನಂದಿಧ್ವಜ ಪೂಜೆ ನೆರವೇರಿಸಿ, ನಂತರ ಜಂಬೂಸವಾರಿಯ ಅಂಬಾರಿ ಮೆರವಣಿಗೆ ಪ್ರಾರಂಭವಾಗಲಿದೆ. ಮೆರವಣಿಗೆ ಬನ್ನಿಮಂಟಪಕ್ಕೆ ತಲುಪಿದ ನಂತರ ಪಂಜಿನ ಮೆರವಣಿಗೆ ರಾತ್ರಿ 8 ರವರೆಗೆ ನಡೆಯಲಿದೆ. ಮಳೆಯ ಅಭಾವ, ವಿದ್ಯುತ್ ಕೊರತೆಯಿಂದ ರೈತರಿಗೆ ತೊಂದರೆಯಾಗಿದೆ. ರಾಜ್ಯದಲ್ಲಿ ಮಳೆಯಾಗಿ, ರೈತರು ಬೆಳೆದ ಬೆಳೆಗಳು ಉಳಿಯುವಂತಾಗಲಿ ಎಂದು ಹಾರೈಸಿದರು.

## ವೇಣುಗೋಪಾಲ ಸ್ವಾಮಿ ದೇವಸ್ಥಾನದಲ್ಲಿ ಅಂಬಿನೋತ್ಸವ



» **ಹೊಳಲ್ಕೆರೆ**

ಪಟ್ಟಣದ ಶ್ರೀ ವೇಣುಗೋಪಾಲ ಸ್ವಾಮಿ ದೇವಸ್ಥಾನದ ನವರಾತ್ರಿ ಹಬ್ಬದ ಅಂಗವಾಗಿ ಹಾಗೂ ಆಯುಧ ಪೂಜಾ ವಿಶೇಷ ಹಿನ್ನೆಲೆಯಲ್ಲಿ ಅಂಬಿನೋತ್ಸವವನ್ನು ಅದ್ದೂರಿಯಾಗಿ ಮಂಗಳವಾರ ಕೈಗೊಳ್ಳಲಾಗಿತ್ತು.

ಮುಜರಾಯಿ ಇಲಾಖೆ ವ್ಯಾಪ್ತಿಯಲ್ಲಿರುವ ಶ್ರೀ ವೇಣುಗೋಪಾಲ ಸ್ವಾಮಿ, ಹೊಳಲ್ಕೆರೆ ಪಟ್ಟಣದ ಕೋಟೆ ಭಾಗದಲ್ಲಿ ನೆಲೆಸಿದ್ದು, ಮುಜರಾಯಿ ಇಲಾಖೆಯಿಂದ ಅಂಬಿನೋತ್ಸವ ಅದ್ದೂರಿಯಾಗಿ ಕೈಗೊಳ್ಳಲಾಗಿತ್ತು. ಹಾಗಾಗಿ ತಹಶಿಲ್ದಾರ್ ಬೀಬಿ ಫಾತಿಮಾ ಸಂಜೆ 5 ಗಂಟೆಗೆ ದೇವಸ್ಥಾನಕ್ಕೆ ಆಗಮಿಸಿ, ವೇಣುಗೋಪಾಲಸ್ವಾಮಿ ದೇವಸ್ಥಾನದಲ್ಲಿ ವಿಶೇಷವಾದ ಪೂಜಾಧಿಗಳನ್ನು ಸಲ್ಲಿಸಿದರು. ಬಳಿಕ ಅಂಬಿನೋತ್ಸವ ಕಾರ್ಯಕ್ರಮದ ಅಂಗವಾಗಿ ವಿವಿಧ ವಾದ್ಯಗಳೊಂದಿಗೆ ವೇಣುಗೋಪಾಲ ಸ್ವಾಮಿ ದೇವಸ್ಥಾನವನ್ನು ಪ್ರದಕ್ಷಣೆ ಹಾಕುವ ಮೂಲಕ ಬನ್ನಿ ಮಹಾಕಾಳಿಗೆ ವಿಶೇಷ ಪೂಜೆ ಸಲ್ಲಿಸಿದರು. ಬನ್ನಿ ಸಂಧೇಶ ನೀಡಿದರು. ಬಳಿಕ ದೇವಸ್ಥಾನದ ಮುಂಭಾಗದಲ್ಲಿ ಅಂಬಿನೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಬಾಳೆಯ ಗಿಡಕ್ಕೆ ವಿಶೇಷವಾದ ಪೂಜೆ ಸಲ್ಲಿಸುವ ಮೂಲಕ ಬಾಳೆ ಗಿಡವನ್ನು ದೇವರ ಕತ್ತಿಯಿಂದ ಒಂದೆ ಭಾರಿಗೆ ಕತ್ತರಿಸುವ ಮೂಲಕ ಅಂಬಿನೋತ್ಸವವನ್ನು ಅದ್ದೂರಿಯಾಗಿ ನಡೆಸಿಕೊಟ್ಟರು.

ಬಳಿಕ ನಡೆದ ಕಾರ್ಯಕ್ರಮದಲ್ಲಿ ಭಕ್ತರನ್ನು ಉದ್ದೇಶಿಸಿ ಮಾತನಾಡಿದ ತಹಶೀಲ್ದಾರ್ ಬೀಬಿ ಫಾತೀಮಾ ವೇಣುಗೋಪಾಲ ಪರಮಾತ್ಮನ ದೈವಿವಾಣಿಯಂತೆ ನಾಡಿನೊದ್ದಕ್ಕು ಉತ್ತಮ ಮಳೆ–ಬೆಳೆ, ಸಕಲ ಜೀವಿಗಳಿಗೂ ಧನಕನಕಾಧಿಗಳು, ಸುಖ ಸಂಪತ್ತು ಭಗವಂತ ಕರುಣಿಸಲಿದ್ದಾನೆ. ಹಾಗಾಗಿ ಪ್ರತಿಯೊಬ್ಬರು ಧರ್ಮದ ಹಾದಿಯಲ್ಲಿ ಸಾಗಬೇಕು. ನ್ಯಾಯ ನೀತಿ ಧರ್ಮಗಳನ್ನು ಬದುಕಿಗೆ ಅಳವಡಿಸಿಕೊಳ್ಳುವ ಮೂಲಕ ಬದುಕು ಕಟ್ಟಿಕೊಳ್ಳಬೇಕು.

ಮನಸ್ಸಿನಲ್ಲಿರುವ ಭಾವನೆಯನ್ನು ದೇವರನ್ನಾಗಿ ನಾವು ಕಾಣುತ್ತಿದ್ದೇವೆ. ಮನಸ್ಸಿನಲ್ಲಿರುವ ಭಾವನೆಗೆ ಪೂರಕವಾಗಿ ದೇವರುಗಳನ್ನ ವಿವಿಧ ರೂಪದಲ್ಲಿ ಕಂಡುಕೊಂಡಿದ್ದೇವೆ. ಸಮಾಜದ ಶಾಂತಿ, ಸುವ್ಯವಸ್ಥೆ, ವಿಶ್ವಾಸ ಕಾಪಾಡಿಕೊಳ್ಳುವುದೇ ದೈವತ್ವದ ಮೊದಲ ಸಂದೇಶ. ಹಾಗಾಗಿ ಸಮಾಜದಲ್ಲಿರುವ ಪ್ರತಿಯೊಬ್ಬರು ಶಾಂತಿಯುತ್ತ ಬದುಕು ಕಟ್ಟಿಕೊಳ್ಳಬೇಕು. ಪರಸ್ಪರ ಪ್ರೀತಿ–ವಿಶ್ವಾಸದಿಂದ ಸಹಬಾಳ್ವೆಯನ್ನು ಮಾಡಬೇಕೆಂದು ಕರೆ ನೀಡಿದರು..

## 'ಶುಚಿ ಯೋಜನೆ'ಯಡಿ 'ಸ್ಯಾನಿಟರ್ ಪ್ಯಾಡ್' ವಿತರಣೆ

» **ಬೆಂಗಳೂರು**

ರಾಜ್ಯಸರ್ಕಾರವುವಿದ್ಯಾರ್ಥಿನಿಯರಿಗೆಸಿಹಿಸುದ್ದಿ ನೀಡಿದ್ದು, ಶುಚಿ ಯೋಜನೆಯಡಿ 10 ರಿಂದ 18 ವಯೋಮಾನದ ವಿದ್ಯಾರ್ಥಿನಿಯರಿಗೆ ಉಚಿತ ಸ್ಯಾನಿಟರಿ ಪ್ಯಾಡ್ ವಿತರಿಸಲಿದೆ.

ಈ ಕುರಿತು ಮಾಹಿತಿ ನೀಡಿರುವ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು, ಶುಚಿ ಯೋಜನೆಯಡಿ 10 ರಿಂದ 18 ವಯೋಮಾನದ 19 ಲಕ್ಷದ 27 ಸಾವಿರ ವಿದ್ಯಾರ್ಥಿನಿಯರಿಗೆ ಉಚಿತ ಸ್ಯಾನಿಟರಿ ಪ್ಯಾಡ್ ಹಂಚಿಕೆ ಮಾಡಲು ಪ್ರಸಕ್ತ ಸಾಲಿನಲ್ಲಿ ರೂ.47 ಕೋಟಿ ಅನುದಾನ ನೀಡಿದ್ದು, ವೈಯಕ್ತಿಕ ಸ್ವಚ್ಚತೆಯ ಮೂಲಕ ದೈಹಿಕ ಆರೋಗ್ಯ ವೃದ್ಧಿಸಿ, ಶೈಕ್ಷಣಿಕ ಸಾಧನೆಗೆ ಈ ಯೋಜನೆಯು ನೆರವಾಗಲಿದೆ.




ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂಬ ಮಾತಿನ ಮಹತ್ವ ನಮಗೆ ತಿಳಿದಿದೆ, ನಾಡಿನ ಪ್ರತಿ ಹೆಣ್ಣುಮಕ್ಕಳು ಗರಿಷ್ಠ ಶಿಕ್ಷಣ ಪಡೆದು ಕುಟುಂಬದ ಮತ್ತು ಸಮಾಜದ ಆಸ್ತಿಯಾಗಬೇಕೆಂಬ ನಿಟ್ಟಿನಲ್ಲಿ ನಾವು ಶ್ರಮಿಸುತ್ತಿದ್ದೇವೆ ಎಂದು ಹೇಳಿದ್ದಾರೆ.

ಸ್ತ್ರೀ ಶಕ್ತಿ ಆರಾಧನೆಯ ಈ ನವರಾತ್ರಿಯ ಶುಭ ಸಂದರ್ಭದಲ್ಲಿ ನಮ್ಮ ಸರ್ಕಾರವು ಮಹಿಳಾ ಸಬಲೀಕರಣಕ್ಕೆ ಬದ್ಧವಾಗಿದ್ದು, ಮಹಿಳೆಯರ ಏಳಿಗೆಗಾಗಿ ಹಗಲಿರುಳು ಶ್ರಮಿಸುತ್ತಿದೆ ಎಂದಿದ್ದಾರೆ.

## ಪ್ರಮುಖ ಸುದ್ದಿ

### ನಾಡಿನ ಜನತೆಗಾಗಿ ಬ್ರಿಟೀಷರ ವಿರುದ್ಧ ಹೋರಾಟ ನಡೆಸಿ ವೀರಮರಣ: ಶಾಸಕ ರಘುಮೂರ್ತಿ

# ಕಿತ್ತೂರು ರಾಣಿ ಚನ್ನಮ್ಮ ಎಂದಿಗೂ ಆದರ್ಶಪ್ರಾಯರು

» **ಚಳ್ಳಕೆರೆ**

ನಾಡಿನ ಜನರ ಹಿತಕ್ಕಾಗಿ ತನ್ನನ್ನು ನಂಬಿದ ಪ್ರಜೆಗಳಿಗಾಗಿ ಕೆಚ್ಚೆದೆಯ ಹೋರಾಟ ನಡೆಸಿ ಬ್ರಿಟೀಷರ ಗುಂಡಿಗೆ ಬಲಿಯಾಗಿ ವೀರಮರಣಹೊಂದಿದ ಕಿತ್ತೂರು ರಾಣಿ ಚನ್ನಮ್ಮ ಎಲ್ಲರಿಗೂ ಆದರ್ಶಪ್ರಾಯರು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಆಯೋಜಿಸಿದ್ದ ಕಿತ್ತೂರುರಾಣಿ ಚನ್ನಮ್ಮ ಜಯಂತಿ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಇಂದಿಗೂ ಸಹ ಕಿತ್ತೂರು ರಾಣಿ ಚನ್ನಮ್ಮ ಹೆಸರು ಕೇಳಿದರೆ ಅವರು ನಡೆಸಿದ ದಿಟ್ಟತನಕದ ಹೋರಾಟ ನಮ್ಮ ಕಣ್ಣಮುಂದೆ ಎದ್ದುನಿಲುತ್ತದೆ. ಬ್ರಿಟೀಷರನ್ನು ತಮ್ಮದೇಯಾದ ಮಾತಿನದಾಟಿಯಲ್ಲಿ ಕಟ್ಟಿಹಾಕಿದ್ದಲ್ಲದೆ, ಬ್ರಿಟೀಷರ ಬುಡವನ್ನು ಅಲ್ಲಾಡಿಸಿದ ವೀರಮಹಿಳೆ ಕಿತ್ತೂರುರಾಣಿ ಚನ್ನಮ್ಮ. ಆದರೆ, ವಿರೋಚಿತ ಹೋರಾಟದಲ್ಲಿ ಕಿತ್ತೂರುರಾಣಿ ಚನ್ನಮ್ಮನನ್ನು ಬ್ರಿಟೀಷರು ಗುಂಡಿಕ್ಕಿ ಕೊಂದರು. ಚನ್ನಮ್ಮನವರ ದಿಟ್ಟತನದ ಹೋರಾಟ ಇಂದಿಗೂ ಮಾದರಿಯಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಸರ್ಕಾರ ಇಂತಹ ಕಾರ್ಯಕ್ರಮಗಳ ಮೂಲಕ ದೇಶ, ನಾಡಿಗಾಗಿ ಶ್ರಮಿಸಿದ ಮಹಾನೀಯರನ್ನು ಸ್ಮರಿಸುವ ಅವಕಾಶವನ್ನು ಮಾಡಿಕೊಟ್ಟಿದೆ. ಈ ಜಯಂತಿ ಕಾರ್ಯಕ್ರಮದ ಮೂಲಕ ನಾವೆಲ್ಲರೂ ಕಿತ್ತೂರ ರಾಣಿ ಚನ್ನಮ್ಮನವರ ದೇಶಪ್ರೇಮದ ಬಗ್ಗೆ ಇನ್ನೂ ಹೆಚ್ಚು ಅರಿಯುವಂತಾಗಿದೆ ಎಂದರು.

ಕಾರ್ಯಕ್ರಮದಲ್ಲಿ ವೀರಶೈವ ಸಂಘಟನೆಗಳ ಪ್ರಮುಖರಾದ ಎಚ್.ವಿ.ಪ್ರಸನ್ನಕುಮಾರ್, ಕೆ.ಎಂ. ಜಗದೀಶ್, ಶಿವಕುಮಾರ್, ಪ್ರಕಾಶ್, ಲೋಕೇಶ್, ನಗರಸಭಾ ಸದಸ್ಯರಾದ ಕೆ.ವೀರಭದ್ರಪ್ಪ, ಟಿ.ಮಲ್ಲಿಕಾರ್ಜುನ್, ರಮೇಶ್‌ಗೌಡ, ಕಾಂಗ್ರೆಸ್ ಮುಖಂಡ ಸಿ.ಟಿ.ಶ್ರೀನಿವಾಸ್, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T